ಸಂಪುಟ : 10 ಸಂಚಿಕೆ: 186 ಪುಟ : 4+2 ಬೆಲೆ: 3.00 ರವಿವಾರ ಆಗಸ್ಟ್ 31 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 186 Pages : 4+2 Price : 3.00 Sunday August 31 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ನೋಂದಣಿ, ಮುದ್ರಾಂಕ ಶುಲ್ಕ ಪರಿಷ್ಕರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಸರ್ಕಾರವು ಆಗಸ್ಟ್ ,31 ರಿಂದ ಜಾರಿಗೊಳಿಸುತ್ತಿರುವ ಸ್ಥಿರಾಸ್ತಿ ಮೇಲಿನ ವ್ಯವಹಾರಗಳ ದಸ್ತಾವೇಜುಗಳಿಗೆ ವಿಧಿಸುತ್ತಿರುವ ನೋಂದಣಿ ಮತ್ತು ಮುದ್ರಾಂಕ ಶುಲ್ಕವು ನೆರೆಹೊರೆಯ ರಾಜ್ಯಗಳಲ್ಲಿರುವ ದರಗಳಿಗಿಂತ ಪ್ರಸ್ತುತ ಕಡಿಮೆ ಶುಲ್ಕ ಇದ್ದು, ಅದನ್ನು ಇತರೆ ರಾಜ್ಯಗಳ ಶುಲ್ಕಗಳೊಂದಿಗೆ ಸಮೀಕರಣ ಮಾಡಿ ಪರಿಷ್ಕರಿಸಲಾಗುತ್ತಿದೆ ಎಂದು ನೋಂದಣಿ ಮತ್ತು ಮುದ್ರಾಂಕ ಶುಲ್ಕ ಆಯುಕ್ತ ಮುಲ್ಲೈ ಮುಗಿಲನ್ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಮುದ್ರಾಂಕ, ನೋಂದಣಿ ಹಾಗೂ ಇತರೆ ಸೆಸ್ ಸೇರಿ ಕರ್ನಾಟಕ ರಾಜ್ಯವು ಶೇ.6.6 ರಷ್ಟು ವಿಧಿಸುತ್ತಿತ್ತು.

ಇದೇ ಅವಧಿಯಲ್ಲಿ ಈ ಶುಲ್ಕವು ತಮಿಳುನಾಡು ರಾಜ್ಯದಲ್ಲಿ ಶೇ.9, ಕೇರಳ ಶೇ.10, ಆಂಧ್ರಪ್ರದೇಶ ಶೇ. 7.5, ತೆಲಂಗಾಣ ರಾಜ್ಯಗಳು ಶೇ.7.5 ರಷ್ಟು ಶುಲ್ಕ ಆಕರಿಸುತ್ತಿವೆ.

ದಸ್ತಾವೇಜುಗಳ ಮೇಲಿನ ಮುದ್ರಾಂಕ ಶುಲ್ಕ ಮತ್ತು ನೋಂದಣಿ ಶುಲ್ಕಗಳನ್ನು ಇತರೆ ರಾಜ್ಯಗಳೊಂದಿಗೆ ಸಮೀಕರಿಸಿಗೊಳ್ಳಲು (Rationalisation) ಆಡಳಿತಾತ್ಮಕ ಪ್ರಕ್ರಿಯೆಗಳನ್ನು ಬಲಪಡಿಸಲು ಮತ್ತು ನಾಗರಿಕರಿಗೆ ಉತ್ತಮ ಹಾಗೂ ಪರಿಣಾಮಕಾರಿ ಸೇವೆಯನ್ನು ನೀಡಲು ರಾಜ್ಯ ಸರ್ಕಾರವು ದಿನಾಂಕ: 31–08–2025 ರಿಂದ ಜಾರಿಗೆ ಬರುವಂತೆ ನೋಂದಣಿ ಶುಲ್ಕವನ್ನು ಶೇಕಡ 1 ರಿಂದ ಶೇ.2 ರಷ್ಟು ಪರಿಷ್ಕರಿಸಿದೆ.

ಪರಿಷ್ಕೃತ ನೋಂದಣಿ ಶುಲ್ಕವನ್ನು ಸುಗಮವಾಗಿ ಇಲಾಖೆಯ ಅಧಿಕೃತ ಪೋರ್ಟಲ್ ಮೂಲಕ ಪಾವತಿಸಲು ಹಿಂದಿನ ನೋಂದಣಿ ಶುಲ್ಕವನ್ನು ಪಾವತಿಸಿ ಈಗಾಗಲೇ ದಸ್ತಾವೇಜುಗಳ ▶▶3ನೇ ಪುಟಕ್ಕೆ

### ರಾಷ್ಟ್ರೀಯ ಹಸಿರು ನ್ಯಾಯಾಧಿಕರಣ ರಾಜ್ಯ ಮಟ್ಟದ ಸಮಿತಿ ಅಧ್ಯಕ್ಷ ಸುಭಾಷ್ .ಬಿ. ಆದಿ ನೇತೃತ್ವದಲ್ಲಿ ಸಭೆ

## ನಿಮ್ಮ ಸುತ್ತಲಿನ ಪರಿಸರ ಸ್ವಚ್ಛತೆಗೆ ಜಾಗೃತಿ ವಹಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಸಾರ್ವಜನಿಕರು ನಿಮ್ಮ ನಿಮ್ಮ ಮನೆಗಳನ್ನು ಸ್ವಚ್ಛವಾಗಿ ಇಟ್ಟುಕೊಂಡಂತೆ ಮನೆಯ ಸುತ್ತಲ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕು. ಈ ಕುರಿತು ಸಾರ್ವಜನಿಕರಿಗೆ ಜಾಗೃತಿಯನ್ನು ಮೂಡಿಸಬೇಕು ಎಂದು ರಾಷ್ಟ್ರೀಯ ಹಸಿರು ನ್ಯಾಯಾಧಿಕರಣ ರಾಜ್ಯ ಮಟ್ಟದ ಸಮಿತಿ ಅಧ್ಯಕ್ಷ ಸುಭಾಷ್ .ಬಿ. ಆದಿ ಅಧಿಕಾರಿಗಳಿಗೆ ಸೂಚಿಸಿದರು.

ಗದಗ ಜಿಲ್ಲಾಡಳಿತ ಭವನದಲ್ಲಿ ಶನಿವಾರ ಜರುಗಿದ ಜಿಲ್ಲಾಮಟ್ಟದ ಕಾರ್ಯಪಡೆ ಸಭೆಯಲ್ಲಿ ಅವರು ಮಾತನಾಡಿದರು.

ನಗರಗಳಲ್ಲಿ ತ್ಯಾಜ್ಯ ವಿಲೇವಾರಿ ಕೇಂದ್ರಗಳನ್ನು ಹಾಗೂ ಮರುಬಳಕೆ ಘಟಕಗಳನ್ನು ಇನ್ನಷ್ಟು ಬಲಪಡಿಸಬೇಕು. ಹಳೆಯ ಕಸದ ಗುಡ್ಡಗಳನ್ನು (ಲೆಗಸಿ ವೇಸ್ಟ್) ತೆರವುಗೊಳಿಸಿ ಶುದ್ಧೀಕರಣಕ್ಕೆ ಕ್ರಮ ಕೈಗೊಳ್ಳಬೇಕು. ಮನೆ–ಮನೆಗಳಲ್ಲಿ ಕಸ ವಿಂಗಡಣೆ ಕಡ್ಡಾಯಗೊಳಿಸಿ, ಜನರಿಗೆ ಜಾಗೃತಿ ಮೂಡಿಸುವ ಕಾರ್ಯ ಪರಿಣಾಮಕಾರಿಯಾಗಲಿ. ಮಳೆ ನೀರು ಮತ್ತು ಒಳಚರಂಡಿ ನೀರು ಮಿಶ್ರಣವಾಗದಂತೆ ತಾಂತ್ರಿಕ ಕ್ರಮಗಳನ್ನು ಅಚ್ಚುಕಟ್ಟಾಗಿ ನಿರ್ವಹಣೆ ಮಾಡಬೇಕು ಎಂದು ನಿರ್ದೇಶಿಸಿದರು.

ಕಟ್ಟಡ ನಿರ್ಮಾಣದಿಂದ ಉಂಟಾಗುವ ಕಸವನ್ನು ಮರುಬಳಕೆ ಮಾಡುವ ಘಟಕ ಸ್ಥಾಪಿಸಬೇಕು. ಅಪಾಯಕಾರಿ ಮತ್ತು ವೈದ್ಯಕೀಯ ತ್ಯಾಜ್ಯವನ್ನು ಸರಿಯಾಗಿ ವಿಲೇವಾರಿ ಮಾಡಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲೇಬೇಕು.



ನಗರಗಳಲ್ಲಿ ಮಲಿನಜಲ ಶುದ್ಧೀಕರಣ ಘಟಕಗಳನ್ನು (STP) ದುರಸ್ತಿಪಡಿಸಿ ನಿರಂತರ ಕಾರ್ಯನಿರ್ವಹಣೆಗೆ ಆದ್ಯತೆ ನೀಡಬೇಕು. STP ಘಟಕಗಳ ಬಳಿ ಎಚ್ಚರಿಕೆ ಫಲಕಗಳನ್ನು ಅಳವಡಿಸಬೇಕೆಂದು ಅವರು ಸೂಚಿಸಿದರು.

ಸ್ಥಳೀಯ ಸಂಸ್ಥೆಗಳಿಂದ ವ್ಯಾಪಾರ ಮಾಡಲು ಟ್ರೇಡ್ ಪರವಾನಿಗೆ ನೀಡುವಾಗ ಪ್ಲಾಸ್ಟಿಕ್ ಬಳಕೆ ಮಾಡುವುದಿಲ್ಲ ಎಂಬ ಷರತ್ತಿನೊಂದಿಗೆ ಪರವಾನಿಗೆ ನೀಡಬೇಕು, ತಪ್ಪಿದಲ್ಲಿ ಪರವಾನಗಿ ರದ್ದು ಮಾಡಬೇಕು. ಹಸಿ ಕಸ, ಒಣಕಸ ಹಾಗೂ ವೈದ್ಯಕೀಯ ತ್ಯಾಜ್ಯ ವಿಂಗಡನೆ, ವಿಲೇವಾರಿ ಕುರಿತು ಜನ ಸಾಮಾನ್ಯರಲ್ಲಿ ಜಾಗೃತಿ ಮೂಡಿಸುವ ಕುರಿತಂತೆ ಕಾರ್ಯಕ್ರಮಗಳು ಪರಿಣಾಮಕಾರಿಯಾಗಿ ಆಗಬೇಕು ಎಂದು ಸೂಚಿಸಿದರು.

ಸ್ಥಳೀಯ ಸಂಸ್ಥೆವಾರು ಪ್ರತಿ ದಿನ ಸಂಗ್ರಹಿಸುವ ಕಸದ ಮಾಹಿತಿಯನ್ನು ಅಧಿಕಾರಿಗಳು ಒದಗಿಸಿದರು. ಗದಗನಲ್ಲಿ 75 ಟನ್, ಗಜೇಂದ್ರಗಡ 11 ಟನ್, ರೋಣ 8, ಮುಂಡರಗಿ 10, ಲಕ್ಷ್ಮೇಶ್ವರ 15, ನರಗುಂದ 14, ನರೇಗಲ್ ಶಿರಹಟ್ಟಿ ಹಾಗೂ ಮುಳುಗುಂದದಲ್ಲಿ ತಲಾ 7 ಟನ್ ಕಸ ಸಂಗ್ರಹಣೆ ಪ್ರತಿದಿನ ಮಾಡಿ ವಿಂಗಡಣೆ ಮೂಲಕ ವಿಲೆ ಮಾಡಲಾಗುತ್ತಿದೆ. ಗ್ರಾಮೀಣ ಬಾಗದಲ್ಲಿ ಒಣಕಸವನ್ನು ಗ್ರಾ.ಪಂ ಮಟ್ಟದಲ್ಲಿ ಸಂಗ್ರಹ ಮಾಡಲಾಗುತ್ತಿದೆ ಎಂದು ಮಾಹಿತಿ ಒದಗಿಸಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೋಟೂರ, ಡಿವೈಎಸ್ಪಿ ಮಹಾಂತೇಶ್ ಸಜ್ಜನರ, ನಗರಸಭೆ ಪೌರಾಯುಕ್ತ ರಾಜಾರಾಮ್ ಪವಾರ, ಡಿಡಿಪಿಐ ಆರ್.ಎಸ್. ಬುರುಡಿ, ಜಿ.ಪಂ ಅಧಿಕಾರಿ ಚಳಗೇರಿ, ಡಿಎಚ್ಓ ಡಾ. ಎಸ್.ಎಸ್. ನೀಲಗುಂದ, ಕೆಎಸ್ಆರ್‌ಟಿಸಿ ವಿಭಾಗೀಯ ನಿಯಂತ್ರಕ ಬಸವಂತಪ್ಪ, ಪರಿಸರ ಮಾಲಿನ್ಯ ಅಧಿಕಾರಿಗಳು ಸೇರಿದಂತೆ ಎಲ್ಲ ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು, ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

### 6 ತಿಂಗಳ ಗಡುವು

ರೊಚ್ಚು ನೀರು ನಿರ್ವಹಣೆ ಘಟಕ ಕಾಮಗಾರಿ ಪೂರ್ಣಗೊಳಿಸುವ ಮೂಲಕ ಹಾಗೂ ಮನೆಗಳಿಗೆ ಪೈಪ್ ಅಳವಡಿಕೆಯನ್ನು ಸ್ಥಳೀಯ ಸಂಸ್ಥೆಗಳು ಮತ್ತು ಕೆಯುಐಡಿಎಫ್ಸಿ ಹಾಗೂ ಕೆಯುಡಬ್ಲ್ಯೂಎಸ್ & ಡಿಬಿ ಇಲಾಖೆಗಳು ಸಮನ್ವಯದೊಂದಿಗೆ ಮುಂದಿನ ಆರು ತಿಂಗಳ ಒಳಗಾಗಿ ಕಾಮಗಾರಿ ಪೂರ್ಣಗೊಳಿಸಿ ಸಾರ್ವಜನಿಕರಿಗೆ ಬಳಕೆಗೆ ನೀಡಬೇಕು ಎಂದು ಮುಚ್ಚಳಿಕೆ ಪತ್ರ ನೀಡುವಂತೆ ಗಡುವು ನೀಡಿದರಲ್ಲದೆ, ಈ ಕಾರ್ಯವು ನೀಡಿದ ಗಡುವಿನೊಳಗೆ ಪೂರ್ಣವಾಗಬೇಕು ಎಂದು ಮತ್ತೊಮ್ಮೆ ಸುಭಾಷ್ .ಬಿ. ಆದಿ ಎಚ್ಚರಿಸಿದರು.

## ಡಿವೈಎಸ್ಪಿ ಜೆ.ಎಚ್. ಇನಾಮದಾರರಿಗೆ ರಾಷ್ಟ್ರಪತಿ ಶ್ಲಾಘನೀಯ ಸೇವಾ ಪ್ರಶಸ್ತಿ



■ವಿಜಯಸಾಕ್ಷಿ ಸುದ್ದಿ, ಗದಗ

ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಉಪವಿಭಾಗದ ನಿಕಟಪೂರ್ವ ಉಪ ಪೊಲೀಸ್ ವರಿಷ್ಠಾಧಿಕಾರಿ ಜೆ.ಎಚ್. ಇನಾಮದಾರರಿಗೆ ರಾಷ್ಟ್ರಪತಿಗಳ ಶ್ಲಾಘನೀಯ ಸೇವಾ ಪ್ರಶಸ್ತಿ ದೊರೆತಿದೆ.

ಬೆಂಗಳೂರಿನಲ್ಲಿ ಶನಿವಾರ ಜರುಗಿದ ಸಮಾರಂಭದಲ್ಲಿ ಡಿಎಸ್ಪಿ ಜೆ.ಎಚ್. ಇನಾಮದಾರರಿಗೆ ರಾಜ್ಯಪಾಲ ಥಾವರಚಂದ್ ಗೆಹಲೋಟ್, ಮುಖ್ಯಮಂತ್ರಿ ಸಿದ್ಧರಾಮಯ್ಯ, ಗೃಹ ಸಚಿವ ಡಾ. ಜಿ. ಪರಮೇಶ್ವರ ಪ್ರಶಸ್ತಿ ಪ್ರದಾನ ಮಾಡಿದರು. 1999ರಲ್ಲಿ ಗದಗ ಸಾರಿಗೆ ಪಿಎಸ್ಐ ಆಗಿ ಸೇವೆ ಪ್ರಾರಂಭಿಸಿದ ಜೆ.ಎಚ್. ಇನಾಮದಾರ, ರಷ್ಯಾದಲ್ಲಿ ಭಾರತೀಯ ಶಾಂತಿ ಪಡೆ, ಲಿಂಗಸೂಗೂರ, ನಾಗಠಾಣ, ವಿಜಯಪೂರ ಮುಂತಾದ ಕಡೆಗಳಲ್ಲಿ ಸಿಪಿಐ, ಡಿಎಸ್ಪಿಯಾಗಿ ಸೇವೆ ಸಲ್ಲಿಸಿದ್ದಾರೆ. ಪ್ರಸ್ತುತ ಯಾದಗಿರಿಯಲ್ಲಿ ಲೋಕಾಯುಕ್ತ ಡಿಎಸ್ಪಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ.

### ಜಿಲ್ಲಾ ತಂಬಾಕು ನಿಷೇಧ ಕೋಶದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆ

## ಕೋಟ್ಪಾ ಕಾಯ್ದೆ ಪರಿಣಾಮಕಾರಿಯಾಗಿ ಅನುಷ್ಠಾನವಾಗಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಕೋಟ್ಪಾ ಕಾಯ್ದೆ ಪರಿಣಾಮಕಾರಿಯಾಗಿ ಅನುಷ್ಠಾನವಾಗಬೇಕು. ಕೋಟ್ಪಾ ಕಾಯ್ದೆ ಉಲ್ಲಂಘನೆಯಾದಲ್ಲಿ ಅಂತಹ ಅಂಗಡಿಗಳ ಪರವಾನಿಗೆಯನ್ನು ರದ್ದುಗೊಳಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ ಜಿಲ್ಲಾ ತಂಬಾಕು ನಿಷೇಧ ಕೋಶದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕೋಟ್ಪಾ ಕಾಯ್ದೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕು. ಕೋಟ್ಪಾ ಕಾಯ್ದೆ ಪ್ರಕಾರ ಶಿಕ್ಷಣ ಸಂಸ್ಥೆಗಳ 100 ಗಜದ ಸುತ್ತಳತೆಯಲ್ಲಿ ತಂಬಾಕು ಉತ್ಪನ್ನಗಳ ಮಾರಾಟ ಶಿಕ್ಷಾರ್ಹ ಅಪರಾಧವಾಗಿದ್ದು, ಶಾಲಾ/ಕಾಲೇಜು ಹಾಗೂ ಶಿಕ್ಷಣ ಸಂಸ್ಥೆಗಳ ಆವರಣದಿಂದ 100 ಗಜದಲ್ಲಿ ತಂಬಾಕು ಮಾರಾಟವಾಗುತ್ತಿದ್ದರೆ ಅಗತ್ಯ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸೂಚಿಸಿದರು.



ಎನ್.ಟಿ.ಸಿ.ಪಿ ಕಾರ್ಯ ಕ್ರಮಾಧಿಕಾರಿ ಡಾ. ವೆಂಕಟೇಶ ರಾಥೋಡ್ ಮಾತನಾಡಿ, ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಗದಗದಿಂದ ಹಮ್ಮಿಕೊಳ್ಳಲಾದ ಕಾರ್ಯಕ್ರಮಗಳ ಕುರಿತು ವಿವರಿಸಿ, ಜಿಲ್ಲೆಯಲ್ಲಿ ಜಿಲ್ಲಾ ತಂಬಾಕು ನಿಷೇಧ ಕೋಶದಿಂದ 18 ದಾಳಿ ನಡೆಸಿ 219 ಪ್ರಕರಣ ದಾಖಲಿಸಿ 35 ಸಾವಿರ ರೂ ದಂಡ ಸಂಗ್ರಹಿಸಲಾಗಿದೆ. ಪೊಲೀಸ್ ಇಲಾಖೆಯಿಂದ ಒಟ್ಟು 1381 ಪ್ರಕರಣ ದಾಖಲಿಸಿ ರೂ. 121550 ದಂಡ ಸಂಗ್ರಹಿಸಲಾಗಿದೆ. ಜಿಲ್ಲೆಯ 11 ಗ್ರಾಮಗಳಲ್ಲಿ ಪ್ರಾಥಮಿಕ ಸಭೆ ಹಾಗೂ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಜಿಲ್ಲಾ ತಂಬಾಕು ನಿಷೇಧ ಕೋಶದಿಂದ 28 ಶಾಲೆ/ಕಾಲೇಜುಗಳನ್ನು ತಂಬಾಕು ಮುಕ್ತ ಶಿಕ್ಷಣ ಸಂಸ್ಥೆ ಘೋಷಣೆ ಪ್ರಕ್ರಿಯೆ ಮಾಡಲಾಗಿದೆ ಎಂದು ವಿವರಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ಡಿವೈಎಸ್‌ಪಿ ಮಹಾಂತೇಶ್ ಸಜ್ಜನರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ, ಜಿಲ್ಲಾ ಆರ್.ಸಿ.ಎಚ್ ಅಧಿಕಾರಿ ಡಾ. ಮೀನಾಕ್ಷಿ, ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ. ವೈ.ಕೆ. ಭಜಂತ್ರಿ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಬಿ.ಸಿ. ಕರಿಗೌಡ್ರ, ಡಾ. ರಾಜೇಂದ್ರ ಬಸರಿಗಿಡದ, ಡಾ. ಅರುಂಧತಿ ಕುಲಕರ್ಣಿ, ತಾಲೂಕು ಆರೋಗ್ಯಾಧಿಕಾರಿಗಳು, ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಸಲಹೆಗಾರರಾದ ಗೋಪಾಲ ಸುರಪುರ, ಮತ್ತಿತರರು ಇದ್ದರು.

ಎಲ್ಲಾ ಅಂಗಡಿ ಮುಂಗಟ್ಟುಗಳ ಮುಂದೆ ಧೂಮಪಾನ ನಿಷೇಧ ಹಾಗೂ 21 ವರ್ಷದೊಳಗಿನವರಿಗೆ ತಂಬಾಕು ನಿಷೇಧ ಕುರಿತ ನಾಮಫಲಕ ಬಿತ್ತರಿಸುವುದು ಅಂಗಡಿ ಮಾಲಿಕರ, ಸ್ಥಳದ ಮುಖ್ಯಸ್ಥರ ಜವಾಬ್ದಾರಿಯೂ ಆಗಿರುತ್ತದೆ. ಕೋಟ್ಪಾ ಕಾಯ್ದೆ ಉಲ್ಲಂಘನೆಯಾದಲ್ಲಿ ಅಂತಹ ಅಂಗಡಿಗಳ ಪರವಾನಿಗೆಯನ್ನು ರದ್ದುಗೊಳಿಸಿ ಕಾನೂನು ರೀತಿ ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿಗಳು ತಿಳಿಸಿದರು.

### ಮುಸ್ಲಿಂ ಮುಖಂಡರ ಒಮ್ಮತದ ತೀರ್ಮಾನ

## ಈದ್ ಮಿಲಾದ್‌ಗೆ ಇಲ್ಲ ಡಿಜೆ




■ವಿಜಯಸಾಕ್ಷಿ ಸುದ್ದಿ, ಗದಗ

ಸೆ. 5ರಂದು ಪ್ರವಾದಿ ಹಜರತ್ ಮಹಮ್ಮದ್ ಪೈಗಂಬರ್ ಜಯಂತಿ (ಈದ್ ಮಿಲಾದ್)ಯನ್ನು ಅರ್ಥಪೂರ್ಣವಾಗಿ ಆಚರಿಸುವ ಉದ್ದೇಶದಿಂದ ಯುವಕರು ಡಿಜೆ ಬಳಸುವುದನ್ನು ಬಿಟ್ಟು ಜನೋಪಯೋಗಿ ಕೆಲಸಗಳನ್ನು ಮಾಡುವ ನಿರ್ಣಯ ಕೈಗೊಳ್ಳಲಾಗಿದೆ ಎಂದು ಮೌಲಾನಾ ಜಕಾರಿಯಾಸಾಬ್ ತಿಳಿಸಿದರು.

ಶನಿವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈದ್ ಮಿಲಾದ್ ದಿನ ಡಿಜೆ ಬಳಸಬಾರದು ಎಂದು ನಿರ್ಣಯಿಸಲಾಗಿದೆ. ಅದೇ ಹಣದಿಂದ ಬಡವರಿಗೆ ಆಹಾರ ಕಿಟ್ ನೀಡಿ, ಶಾಂತಿಯ ಸಂದೇಶ ಸಾರಬೇಕು ಎಂದು ತಿಳಿಸಿದರು.

ಈ ಕುರಿತುಎಲ್ಲ ಜಮಾತ್ ಮುಖಂಡರು, ಈದ್ ಮಿಲಾದ್ ಕಮಿಟಿ ಪದಾಧಿಕಾರಿಗಳು, ನೌ–ಜವಾನ್ ಕಮಿಟಿಯ ಮುಖಂಡರು ಗಂಗಿಮಡಿಯ ಮಸೀದಿಯಲ್ಲಿ ಸಭೆ ನಡೆಸಿ ಒಮ್ಮತದ ನಿರ್ಣಯ ತೆಗೆದುಕೊಳ್ಳಲಾಗಿದೆ. ಶಾಂತಿ ನಮ್ಮ ಮೂಲ ಧರ್ಮವಾಗಿದೆ. ಈ ನಿಟ್ಟಿನಲ್ಲಿ ಈದ್ ಮಿಲಾದ್ ದಿನದಂದು ಯಾರಾದರೂ ಡಿಜೆಗೆ ಅವಕಾಶ ನೀಡಿ ಎಂದು ಮನವಿ ಮಾಡಿದರೆ ಆ ಮನವಿಗೆ ಅವಕಾಶ ಕೊಡಬಾರದು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಮನವಿ ಮಾಡಿಕೊಳ್ಳಲಾಗಿದೆ ಎಂದು ತಿಳಿಸಿದರು. ▶▶3ನೇ ಪುಟಕ್ಕೆ

ಈದ್ ಮಿಲಾದ್ ಅತ್ಯಂತ ಪವಿತ್ರ ಹಬ್ಬ. ಈ ದಿನ ಬಡವರಿಗೆ, ನಿರ್ಗತಿಕರಿಗೆ ಸಹಾಯ ಮಾಡವುದೇ ನಮ್ಮ ಧ್ಯೇಯ. ಡಿಜೆ ಬಳಸುವುದರಿಂದ ರೋಗಿಗಳಿಗೆ, ವೃದ್ಧರಿಗೆ ಹಾಗೂ ಚಿಕ್ಕ ಮಕ್ಕಳಿಗೆ ಅಪಾಯ ಆಗುವ ಸಾಧ್ಯತೆ ಇರುತ್ತದೆ. ಈ ನಿಟ್ಟಿನಲ್ಲಿ ಈದ್ ಮಿಲಾದ್ ದಿನದಂದು ಡಿಜೆ ಬಳಸದೇ ಶಾಂತಿಯ ಸಂದೇಶ ಸಾರಲು ಗದಗ–ಬೆಟಗೇರಿ ಜಮಾತ್ ಎಲ್ಲ ಮುಖಂಡರು ತಿರ್ಮಾನಿಸಿದ್ದಾರೆ.

**– ಸಯ್ಯದ ಖಾಲಿದ್ ಕೊಪ್ಪಳ.**

### ವಿದ್ಯಾರ್ಥಿಗಳ ಆತ್ಮಹತ್ಯೆ ತಡೆ, ಮಾನಸಿಕ ಆರೋಗ್ಯ ಕಾಳಜಿಗಾಗಿ ಜಿಲ್ಲಾ ಮಟ್ಟದ ಮೇಲ್ವಿಚಾರಣಾ ಸಮಿತಿ ಸಭೆ

## ಮಕ್ಕಳ ಆತ್ಮಸ್ಥೈರ್ಯ ವೃದ್ಧಿಗೆ ಕ್ರಮವಹಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳ ಆತ್ಮಹತ್ಯೆ ಪ್ರಕರಣಗಳ ತಡೆಗಟ್ಟುವಿಕೆ ಹಾಗೂ ಮಾನಸಿಕ ಆರೋಗ್ಯ ಕಾಳಜಿ ಕ್ರಮಗಳನ್ನು ಜಾರಿಗೆ ತರಲು ಜಿಲ್ಲಾ ಮಟ್ಟದ ಮೇಲ್ವಿಚಾರಣಾ ಸಮಿತಿ ಸಭೆಯು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಜರುಗಿತು.

ಸಭೆಯಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಮಾತನಾಡಿ, ಎಲ್ಲ ಸರ್ಕಾರಿ ಮತ್ತು ಖಾಸಗಿ ಶಿಕ್ಷಣ ಸಂಸ್ಥೆಗಳು ಹಾಗೂ ತರಬೇತಿ ಕೇಂದ್ರಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಮಾನಸಿಕ ಮತ್ತು ದೈಹಿಕ ಯೋಗಕ್ಷೇಮ ಹಾಗೂ ಮಕ್ಕಳ ಸುರಕ್ಷತೆ ಖಚಿತಪಡಿಸುವುದು, ವಿದ್ಯಾರ್ಥಿಗಳ ಆರೋಗ್ಯ ವೃದ್ಧಿಗಾಗಿ ನಿರಂತರ ಸಮೀಕ್ಷೆ ಹಾಗೂ ಪರಿಶಿಲನೆ ನಡೆಸುವುದು ಸಮಿತಿಯ ಉದ್ದೇಶವಾಗಿದೆ ಎಂದರು.



ವಿದ್ಯಾರ್ಥಿಗಳು ಕೆಲವೊಂದು ಸಂದಿಗ್ಧ ಸಂದರ್ಭಗಳಲ್ಲಿ ಪರಿಸ್ಥಿತಿ ಎದುರಿಸಲಾಗದೇ ಖಿನ್ನತೆಗೊಳಗಾಗಿ ಆತ್ಮಹತ್ಯೆ ಮಾಡಿಕೊಂಡು ತಮ್ಮ ಅಮೂಲ್ಯ ಬದುಕನ್ನು ಕಳೆದುಕೊಳ್ಳುತ್ತಿದ್ದಾರೆ. ಅವರಲ್ಲಿ ಆತ್ಮಸ್ಥೈರ್ಯ ತುಂಬಲು ಶಿಕ್ಷಣ ಸಂಸ್ಥೆಗಳಲ್ಲಿ ಸಿಬ್ಬಂದಿಗಳಿಗೆ ಮಾನಸಿಕ ಆರೋಗ್ಯದ ಕುರಿತು ತರಬೇತಿ ಏರ್ಪಡಿಸಬೇಕು. ವಿದ್ಯಾರ್ಥಿಗಳ ಪಾಲಕರೂ ಸಹ ತಮ್ಮ ಮಕ್ಕಳೊಂದಿಗೆ ಸಮಯ ಕಳೆಯುವುದು ಇಂದಿನ ಅವಶ್ಯಕತೆಯಾಗಿದೆ ಎಂದು ಹೇಳಿದರು.

ಎಲ್ಲ ಶಿಕ್ಷಣ ಸಂಸ್ಥೆಗಳು ವಿಶೇಷವಾಗಿ ತರಬೇತಿ ಸಂಸ್ಥೆಗಳು, ಮಾನಸಿಕ ಆರೋಗ್ಯ ಸೇವೆಗಳು, ಸ್ಥಳೀಯ ಆಸ್ಪತ್ರೆಗಳು ಹಾಗೂ ಆತ್ಮಹತ್ಯೆ ತಡೆಗಟ್ಟುವಿಕೆ ಸಹಾಯವಾಣಿಗಳ ತ್ವರಿತ ಸೇವೆ ಪಡೆಯಲು ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು. ಟೆಲಿಮಾನಸ್ ಮತ್ತು ಇತರೆ ರಾಷ್ಟ್ರೀಯ ಸಹಾಯವಾಣಿ ಸಂಖ್ಯೆಗಳ ಮಾಹಿತಿಯನ್ನು ಹಾಸ್ಟೆಲ್‌ಗಳು, ತರಗತಿ ಕೊಠಡಿಗಳು, ಸಾಮಾನ್ಯ ಸ್ಥಳಗಳು ಮತ್ತು ವೆಬ್‌ಸೈಟ್‌ಗಳಲ್ಲಿ ಸ್ಪಷ್ಟವಾಗಿ ಪ್ರದರ್ಶಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕ ಆರ್. ಎಸ್. ಬುರುಡಿ ಮಾತನಾಡಿ, ಶಾಲೆಗಳಲ್ಲಿ ಮಕ್ಕಳ ಸಲಹಾ ಪೆಟ್ಟಿಗಗಳನ್ನು ಮಾಡಬೇಕು. ಮಕ್ಕಳ ಸುರಕ್ಷತಾ ಸಮಿತಿ ರಚನೆ ಮಾಡಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಡಿವೈಎಸ್‌ಪಿ ಮಹಾಂತೇಶ ಸಜ್ಜನರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಮೆಹಬೂಬ ತುಂಬರಮಟ್ಟಿ, ಜಿಮ್ಸ್‌ನ ಮನೋರೋಗ ತಜ್ಞರು ಹಾಗೂ ಉಪವೈದ್ಯಕೀಯ ಅಧೀಕ್ಷಕರು ಡಾ. ಸೋಮಶೇಖರ ಬಿಜ್ಜಳ, ಮಕ್ಕಳ ರಕ್ಷಣಾ ಘಟಕದ ಅಧಿಕಾರಿ ರಫೀಕಾ ಹಳ್ಳೂರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಪದ್ಮಾವತಿ ಜಿ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕಿ ನಂದಾ ಹಣಬರಟ್ಟಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

### ನಿಷ್ಠೆ, ಪ್ರಾಮಾಣಿಕತೆ ಮತ್ತು ಕರ್ತವ್ಯ ಶ್ರದ್ಧೆಯೇ ಇವರ ಬದುಕಿನ ಆಧಾರ

# ಜನಪರ ಧೋರಣೆಯ ಮಾರುತಿ ಜೋಗದಂಡಕರ

ಸುದೀರ್ಘ 32 ವರ್ಷಗಳ ಸೇವೆಯಲ್ಲಿ ತೋರಿದ ಪರಿಶ್ರಮ, ಜನಪರ ಧೋರಣೆ, ಅನೇಕ ಪ್ರಕರಣಗಳ ಪತ್ತೆ, ಇಲಾಖೆಗೆ ತಂದುಕೊಟ್ಟ ಗೌರವ ಹಾಗೂ ಸಮಾಜದ ವಿಶ್ವಾಸ ಇವುಗಳ ಆಧಾರದ ಮೇಲೆ ಮಾರುತಿ ಶಂಕರ ಜೋಗದಂಡಕರರು 2022ರ ಗಣರಾಜ್ಯೋತ್ಸವದ ಸಂದರ್ಭದಲ್ಲಿ ರಾಷ್ಟ್ರಪತಿಗಳ ಪೊಲೀಸ್ ಪದಕಕ್ಕೆ ಭಾಜನರಾದ ಮಾರುತಿ ಶಂಕರ ಜೋಗದಂಡಕರರ ಸಾಧನೆ ಅನುಪಮವಾದದ್ದು.



22 ಜೂನ್ 1968ರಂದು ಗದಗನಲ್ಲಿ ಜನಿಸಿದ ಮಾರುತಿ ಶಂಕರ ಜೋಗದಂಡಕರರು ತಾಯಿಯ ಆಶ್ರಯದಲ್ಲಿ ಬಡತನವನ್ನು ಎದುರಿಸಿ ಬೆಳೆದವರು. ಬಾಲ್ಯದಲ್ಲೇ ದುಡಿಮೆ, ತಾಳ್ಮೆ ಮತ್ತು ಕಷ್ಟಸಹಿಷ್ಣುತೆಯನ್ನು ಜೀವನದ ಶ್ರೇಷ್ಠ ಪಾಠವಾಗಿ ಮಾಡಿಕೊಂಡರು. ಸಣ್ಣ ವಯಸ್ಸಿನಿಂದಲೇ ಗಾರೆ ಕೆಲಸ, ಇಟ್ಟಿಗೆ ಕಾರ್ಖಾನೆ, ಹತ್ತಿ ಮಿಲ್ ಹಾಗೂ ಆಸ್ಪತ್ರೆಗಳಲ್ಲಿ ದುಡಿದು ಕುಟುಂಬವನ್ನು ಪೋಷಿಸುವ ಜವಾಬ್ದಾರಿಯ ಜೊತೆಗೆ ವಿದ್ಯಾಭ್ಯಾಸವನ್ನೂ ಮುಂದುವರೆಸಿದರು.

ಗದಗ ಮುನ್ಸಿಪಲ್ ಹೈಸ್ಕೂಲ್‌ನಲ್ಲಿ ಪ್ರಾಥಮಿಕ ವಿದ್ಯಾಭ್ಯಾಸ ಪೂರ್ಣಗೊಳಿಸಿ, ಪಿಯುಸಿ ತನಕ ಅಭ್ಯಾಸ ನಡೆಸಿದರು. ಬಳಿಕ ಜಗದ್ಗುರು ಕಾಲೇಜಿನಲ್ಲಿ ಪದವಿ ಶಿಕ್ಷಣ ಪಡೆದರು. ಕಾಲೇಜು ದಿನಗಳಲ್ಲಿ ಆಟೋ ರಿಕ್ಷಾ ನಡೆಸುತ್ತಾ ಬಿಎ ಪದವಿಯವರೆಗೆ ವಿದ್ಯಾಭ್ಯಾಸವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದರು. ಇದು ಅವರ ತಾಳ್ಮೆ ಮತ್ತು ಪರಿಶ್ರಮಕ್ಕೆ ಹಿಡಿದ ಕನ್ನಡಿ.

24 ಅಕ್ಟೋಬರ್, 1993ರಂದು ಧಾರವಾಡ ಜಿಲ್ಲೆಯ ಪೊಲೀಸ್ ವರಿಷ್ಠಾಧಿಕಾರಿ ಕೆಂಪಯ್ಯ ಅವರ ನೇಮಕಾತಿಯಲ್ಲಿ ಪೊಲೀಸ್ ಇಲಾಖೆಗೆ ಸೇರಿದರು. ಆರಂಭದಲ್ಲಿ ಪೊಲೀಸ್ ಕಾನ್ಸ್‌ಟೇಬಲ್/ಹೆಡ್ ಕಾನ್ಸ್‌ಟೇಬಲ್ ಆಗಿ ಕರ್ತವ್ಯ ನಿರ್ವಹಿಸಿ, 6 ಜೂನ್ 2019ರಂದು ಎ.ಎಸ್.ಐ ಹುದ್ದೆಗೆ ಪದೋನ್ನತಿ ಪಡೆದು ಜಿಲ್ಲಾ ಅಪರಾಧ ವಿಭಾಗದಲ್ಲಿ ಸೇವೆ ಸಲ್ಲಿಸಿದರು.

ಶಿಗ್ಗಾವಿ, ಮುಂಡರಗಿ, ನರಗುಂದ, ಗದಗ ಗ್ರಾಮೀಣ ಠಾಣೆ ಹಾಗೂ ಗದಗ ಜಿಲ್ಲಾ ಪೊಲೀಸ್ ಕಚೇರಿಯಲ್ಲಿ ದೀರ್ಘಾವಧಿ ಸೇವೆ ಸಲ್ಲಿಸಿ, ಅನೇಕ ಕ್ಲಿಷ್ಟಕರ, ಸಂವೇದನಾಶೀಲ ಮತ್ತು ಗಂಭೀರ ಪ್ರಕರಣಗಳನ್ನು ಪತ್ತೆ ಹಚ್ಚಿ ಇಲಾಖೆ ಹಾಗೂ ಸಾರ್ವಜನಿಕರಿಂದ ಮೆಚ್ಚುಗೆ ಪಡೆದರು.



2010ರಿಂದ 2024ರವರೆಗೆ ಕ್ರೈಂ ಇನ್ ಇಂಡಿಯಾ, ಅಸ್ವಾಭಾವಿಕ ಸಾವುಗಳು, ರಸ್ತೆ ಅಪಘಾತಗಳು ಹಾಗೂ ಇತರ ಪ್ರಮುಖ ಪ್ರಕರಣಗಳ ಅಂಕಿ-ಅಂಶಗಳನ್ನು ನಿಖರವಾಗಿ ಅಳವಡಿಸಿ ರಾಜ್ಯ ಮತ್ತು ಕೇಂದ್ರ ಮಟ್ಟದಲ್ಲಿ ಇಲಾಖೆಗೆ ಗೌರವ ತಂದರು. ಎಡಿಜಿಪಿ (ಬೆಂಗಳೂರು) ಹಾಗೂ ಐಜಿಪಿ (ಉತ್ತರ ವಲಯ, ಧಾರವಾಡ) ಅವರಿಂದ ಪ್ರಶಂಸಾ ಪತ್ರಗಳಿಗೆ ಪಾತ್ರರಾದರು. ಹಲವಾರು ಬಾರಿ ನಗದು ಬಹುಮಾನಗಳು ಹಾಗೂ 'ಅತ್ಯುತ್ತಮ ಸನ್ಮಾನಿತ' ಗೌರವ (2010ರಿಂದ 2024ರವರೆಗೆ) ಪಡೆದರು.

ಮಾರುತಿ ಶಂಕರ ಜೋಗದಂಡಕರರು ಜನಸಾಮಾನ್ಯರೊಂದಿಗೆ ಸದಾ ಹತ್ತಿರ ಬಾಂಧವ್ಯ ಕಾಪಾಡಿಕೊಂಡು, ಸೇವಾ ಮನೋಭಾವದಿಂದ ಕರ್ತವ್ಯ ನಿರ್ವಹಣೆ ಮಾಡಡುತ್ತ, ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ, ಸೊತ್ತು ಪ್ರಕರಣಗಳು ಹಾಗೂ ಅಪರಾಧ ಪತ್ತೆಯಲ್ಲಿ ನಿರಂತರ ಶ್ರೇಷ್ಠ ಸಾಧನೆಗೈದಿದ್ದಾರೆ. ಹಲವು ಸಾಂಸ್ಕೃತಿಕ ಹಾಗೂ ಸಾಮಾಜಿಕ ಚಟುವಟಿಕೆಗಳಲ್ಲಿ ಪೊಲೀಸ್ ಇಲಾಖೆಯನ್ನು ಪ್ರತಿನಿಧಿಸಿ ಪಾಲ್ಗೊಂಡು ಸಮಾಜದೊಂದಿಗೆ ಒಗ್ಗಟ್ಟು ಬೆಳೆಸಿದ್ದಾರೆ.

ನಿಷ್ಠೆ, ಪ್ರಾಮಾಣಿಕತೆ ಮತ್ತು ಕರ್ತವ್ಯ ಶ್ರದ್ಧೆಯೇ ಇವರ ಬದುಕಿನ ಆಧಾರ. 'ಪೊಲೀಸ್ ಸೇವೆ ಎಂದರೆ ಕೇವಲ ಕೆಲಸವಲ್ಲ, ಅದು ಸಮಾಜ ಸೇವೆ' ಎಂಬ ತತ್ವದೊಂದಿಗೆ ಸದಾ ಜನಪರ ಧೋರಣೆಯೊಂದಿಗೆ ಕಠಿಣತೆ ಮತ್ತು ಮಾನವೀಯತೆ ಎಂಬ ಎರಡು ಮುಖಗಳನ್ನು ಸಮತೋಲನಗೊಳಿಸಿ ಕರ್ತವ್ಯ ಪಥದಲ್ಲಿ ಸಾಗಿದ್ದಾರೆ.

ಲಕ್ಷ್ಮೇಶ್ವರ ಪೊಲೀಸ್ ಠಾಣೆಯಲ್ಲಿ ಪಿಎಸ್‌ಐ ಆಗಿ ಸೇವೆ ಸಲ್ಲಿಸಿ ಅನೇಕ ಸೊತ್ತು ಪ್ರಕರಣಗಳನ್ನು ಯಶಸ್ವಿಯಾಗಿ ಪತ್ತೆಮಾಡಿದರು. ಪ್ರಸ್ತುತ ಗದಗ ತಾಲೂಕಿನ ಬೆಟಗೇರಿ ಬಡಾವಣೆ ಪೊಲೀಸ್ ಠಾಣೆಯಲ್ಲಿ ಪಿಎಸ್‌ಐ ಆಗಿ ಸೇವೆ ಸಲ್ಲಿಸುತ್ತಿದ್ದು, ಅಪರಾಧ ನಿಯಂತ್ರಣದಲ್ಲಿ ಶ್ರೇಷ್ಠ ಸಾಧನೆ ತೋರಿಸುತ್ತಿದ್ದಾರೆ. ಪೊಲೀಸ್ ಇಲಾಖೆಯಲ್ಲಿನ ಸೇವಾ ನಿಷ್ಠೆ, ಶ್ರೇಷ್ಠ ಸಾಧನೆ, ಕಾರ್ಯತತ್ಪರತೆ, ನಿಖರ ಅಂಕಿ-ಅಂಶ ನಿರ್ವಹಣೆ ಮತ್ತು ಸಾರ್ವಜನಿಕರ ವಿಶ್ವಾಸಾರ್ಹತೆ ಇವುಗಳನ್ನು ಪರಿಗಣಿಸಿ ಗದಗ ಜಿಲ್ಲಾ ಪೊಲೀಸ್ ಅಧೀಕ್ಷಕರು 2022ರ ಗಣರಾಜ್ಯೋತ್ಸವದ ಸಂದರ್ಭದಲ್ಲಿ ರಾಷ್ಟ್ರಪತಿಗಳ ಪೊಲೀಸ್ ಪದಕಕ್ಕೆ ಅವರ ಹೆಸರನ್ನು ಶಿಫಾರಸು ಮಾಡಿದರು.

## ಸೆಪ್ಟೆಂಬರ್ 1 ಮತ್ತು 2 ರಂದು ಕೊಪ್ಪಳದ ಕೋಟ್ಯಾಧಿಪತಿ ಕಾರ್ಯಕ್ರಮ

■ **ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ನಗರದ ಡಾ. ಸಿಂಪಿ ಲಿಂಗಣ್ಣ ರಸ್ತೆಯ ಶ್ರೀ ಗಜಾನನ ಗೆಳೆಯರ ಬಳಗದಿಂದ ಗಣೇಶೋತ್ಸವದ ಅಂಗವಾಗಿ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ವಿದ್ಯಾರ್ಥಿಗಳನ್ನು ರೂಪಿಸುವ ಉದ್ದೇಶದ ಕೊಪ್ಪಳದ ಕೋಟ್ಯಾಧಿಪತಿ ಕಾರ್ಯಕ್ರಮವು ಸೆಪ್ಟೆಂಬರ್ 1 ಮತ್ತು 2 ರಂದು ಗಣೇಶೋತ್ಸವದ ವೇದಿಕೆಯಲ್ಲಿ ನಡೆಯಲಿದೆ.

ಈ ಕುರಿತು ಪ್ರಕಟಣೆ ನೀಡಿರುವ ಬಳಗದ ಅಧ್ಯಕ್ಷ ಬಸವರಾಜ ಕರುಗಲ್ ಅವರು, ಮೊದಲ ದಿನದ ಕಾರ್ಯಕ್ರಮವನ್ನು ಗವಿಶ್ರೀಗಳು ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಧಾರವಾಡದ ಕ್ಲಾಸಿಕ್ ಸ್ಟಡಿ ಸರ್ಕಲ್‌ನ ಲಕ್ಷ್ಮಣ ಉಪ್ಪಾರ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶ್ರೀನಿವಾಸ ಗುಪ್ತಾ, ಸಮಾಜ ಸೇವಕ




ವೆಂಕಟೇಶ ಬಾರಕೇರ, ಜೆಡಿಎಸ್ ಮುಖಂಡ ಸಿ.ವಿ.ಚಂದ್ರಶೇಖರ, ಬಿಜೆಪಿ ಮುಖಂಡ ಡಾ.ಬಸವರಾಜ ಕ್ಯಾವಟರ್, ಪ್ರಖ್ಯಾತ ವೈದ್ಯ ಡಾ.ಮಂಜುನಾಥ ಜಂತ್ಲಿ ಭಾಗವಹಿಸುವರು.


ವಿಜೇತರಿಗೆ ಒಂದು ಕೋಟಿ ಅಂಕ, ಪುಸ್ತಕ ಹಾಗೂ ನಗದು ಬಹುಮಾನ ನೀಡಲಾಗುವುದು. ಕಾರ್ಯಕ್ರಮ ವೀಕ್ಷಿಸಲು ಎಲ್ಲರಿಗೂ ಮುಕ್ತ ಆಹ್ವಾನವಿದೆ ಎಂದು ತಿಳಿಸಿದ್ದಾರೆ.

## ಡಾ. ಎಂ.ಎಂ. ಕಲಬುರ್ಗಿ ಸ್ಮರಣೋತ್ಸವ ಇಂದು

■ **ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಆಗಸ್ಟ್ 31ರ ಬೆಳಿಗ್ಗೆ 11ಕ್ಕೆ ನಡೆಯಲಿರುವ ಬಸವದಳದ 1661ನೇ ಶರಣ ಸಂಗಮದಲ್ಲಿ ಹುತಾತ್ಮ ಡಾ. ಎಂ.ಎಂ. ಕಲಬುರ್ಗಿಯವರ 10ನೇ ಸ್ಮರಣೋತ್ಸವ ಹಾಗೂ ಬಸವದಳ ಗದಗ-ಬೆಟಗೇರಿ ಇದರ 2024-25ನೇ ಸಾಲಿನ ವಾರ್ಷಿಕ ಮಹಾಸಭೆಯನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಬಸವದಳದ ಅಧ್ಯಕ್ಷ ಶರಣ ವಿ.ಕೆ. ಕರೇಗೌಡ್ರ ವಹಿಸುವರು. ಶರಣ ಕೆ.ಎಸ್. ಬಾಳಿಕಾಯಿ ಉಪನ್ಯಾಸ ಮಾಡುವರು.



ಅತಿಥಿಗಳಾಗಿ ಶರಣ ಕೆ.ಎಸ್. ಚೆಟ್ಟಿ (ಸಿ.ಎ) ಆಗಮಿಸುವರು.

ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿ ವಿನಂತಿಸಿದ್ದಾರೆ.

### ಪ್ರೇಕ್ಷಕರನ್ನು ಭಕ್ತಿಭಾವದಲ್ಲಿ ತೇಲಿಸಿದ ಸಂಗೀತ ರೂಪಕ ಪ್ರದರ್ಶನ

# 'ಧೀರ ಶ್ರೀರಾಘವೇಂದ್ರ ವೃತಿವರ'

ಕಲಿಯುಗದ ಕಾಮಧೇನು, ಕಲ್ಪವೃಕ್ಷ ಶ್ರೀಗುರು ರಾಘವೇಂದ್ರ ಸ್ವಾಮಿಗಳ ಮಹಿಮೆ ಅಪಾರ. ಭಕ್ತವತ್ಸಲಾಗಿರುವ ಅವರ ತಮ್ಮ ಮಾತೃಭಾವದ ಅಂತಃಕರಣ ಶಕ್ತಿಯಿಂದ ಇಂದಿಗೂ ಭಕ್ತರ ಉದ್ಧಾರ ಮಾಡುತ್ತಿದ್ದಾರೆ. ಅಂತಹ ಶ್ರೀಗುರು ರಾಘವೇಂದ್ರ ಯತಿಗಳ ಜೀವನದ ಸಂಧ್ಯಾಕಾಲದ ದಿನಗಳನ್ನು ಹಾಗೂ ರಾಯರ ವೃಂದಾವನದಲ್ಲಿ ನೆಲೆನಿಂತ ನಂತರದ ಪವಾಡ ಮಹಿಮಾ ದೃಶ್ಯಗಳನ್ನು 'ದಾಸಚಿಂತನಮಣಿ' ಪ್ರಶಸ್ತಿ ಪುರಸ್ಕೃತರಾದ ಹಿರಿಯ ರಂಗಕರ್ಮಿ ಫಣೀಂದ್ರಾಚಾರ್ಯ ದ್ಯಾಮೇನಹಳ್ಳಿಯವರು 'ಧೀರ ಶ್ರೀರಾಘವೇಂದ್ರ ವೃತಿವರ' ಎಂಬ ಸಂಗೀತ ರೂಪಕಕ್ಕೆ ಅಳವಡಿಸಿದ್ದು, ಅದು ಇತ್ತೀಚೆಗೆ ರಾಯರ ಆರಾಧನೆಯ ಸಂದರ್ಭದಲ್ಲಿ ಗದುಗಿನ ಕರಿಯಮ್ಮಕಲ್ಲು ಬಡಾವಣೆಯಲ್ಲಿರುವ ಶ್ರೀಗುರು ರಾಘವೇಂದ್ರ ಸ್ವಾಮಿಗಳ ಶ್ರೀಮಠದಲ್ಲಿ ಯಶಸ್ವಿಯಾಗಿ ಪ್ರದರ್ಶನಗೊಂಡು ಪ್ರೇಕ್ಷಕರನ್ನು ಭಕ್ತಿಭಾವದಲ್ಲಿ ತೇಲಿಸಿತು.

ಬ್ರಹ್ಮದೇವರ ಪರಿಚಾರಕನಾದ ಶಂಕುಕರ್ಣನು ವಿವಿಧ ಅವತಾರಗಳನ್ನು ತಾಳಿ ಭಕ್ತರನ್ನು ಉದ್ಧರಿಸುತ್ತಾ ಸಾಗಿ ಕೊನೆಯ ಅವತಾರದಲ್ಲಿ ಶ್ರೀಗುರು ರಾಘವೇಂದ್ರ ಸ್ವಾಮಿಗಳಾಗಿ ಭಕ್ತರ ಸಾರೋದ್ಧಾರಗೈಯುತ್ತಾರೆ. ಪ್ರಸ್ತುತ ಸಂಗೀತ ರೂಪಕವು ರಾಘವೇಂದ್ರ ಸ್ವಾಮಿಗಳ ವಿವಿಧ ಪವಾಡಗಳು ಹಾಗೂ ಮಹಿಮೆಗಳನ್ನೊಳಗೊಂಡಿದೆ. ನವಾಬನು ಅಭಕ್ಷಭೋಜ್ಯಗಳಾದ ಮಾಂಸ ಮೊದಲಾದಿಗಳನ್ನು ನೀಡಿ ರಾಯರನ್ನು ಪರೀಕ್ಷಿಸಲು ಬಂದಾಗ ಅವು ಚಮತ್ಕಾರಿಕ ರೀತಿಯಲ್ಲಿ ಹಣ್ಣು-ಹಂಪಲುಗಳಾಗಿ ಪರಿವರ್ತಿತವಾಗುತ್ತವೆ. ಮುಂದೆ ರಾಯರ ದಾಸಾನುದಾಸ ಸದ್ಭಕ್ತನಾಗಿ



ಪರಿವರ್ತನೆ ಹೊಂದಿದ ನವಾಬನು ಅವರಿಗೆ ಮಂಚಾಲೆ ಪರಿಸರವನ್ನು ದಾನವನ್ನಾಗಿ ನೀಡುತ್ತಾನೆ. ಶ್ರೀಗುರು ರಾಘವೇಂದ್ರ ರಾಯರು ಮುಂದೆ ಅಲ್ಲಿಯೇ ವೃಂದಾವನಸ್ಥರಾಗುವ ಆಶಯವನ್ನು ವ್ಯಕ್ತಪಡಿಸುತ್ತಾರೆ. ಬೃಂದಾವನ ನಿರ್ಮಾಣ, ನಂತರದ ಶ್ರೀ ರಾಯರ ಮಹಿಮಾಪೂರಿತ ಘಟನೆಗಳು ಅತ್ಯಂತ ಹೃದಯಸ್ಪರ್ಶಿಯಾಗಿ ಸಂಗೀತ ರೂಪಕದಲ್ಲಿ ಹರಳುಗಟ್ಟಿವೆ.

ಬಳ್ಳಾರಿಯ ವಿಭಾಗದ ಆಂಗ್ಲ ಅಧಿಕಾರಿ ಮೇಜರ್ ಮನ್ರೊ ಎಂಬುವವನು ಮಂತ್ರಾಲಯವನ್ನು ಬ್ರಿಟಿಷರ ಆಡಳಿತಕ್ಕೆ ಒಳಪಡಿಸಬೇಕೆಂದು ಧಾವಿಸಿ ಬಂದಾಗ ಅವನೊಂದಿಗೆ ಆಂಗ್ಲ ಭಾಷೆಯಲ್ಲಿ ಮಾತನಾಡಿ ಮಂತ್ರಾಕ್ಷತೆಯನ್ನು ಕೊಟ್ಟು ಕಳಿಸುತ್ತಾರೆ. ಆತ ದಿಗ್ಭ್ರಾಂತನಾಗಿ ಈ ಗುರುಗಳು ಸಾಮಾನ್ಯರಲ್ಲ ಎಂದು ಅರಿತು ಮಂತ್ರಾಲಯ ವಶಪಡಿಸಿಕೊಳ್ಳುವ ವಿಚಾರವನ್ನು ತ್ಯಜಿಸಿ ದೀರ್ಘಪ್ರಣಾಮ ಸಲ್ಲಿಸಿ ಹೋಗುತ್ತಾನೆ. ಈ ಘಟನೆ ಬಳ್ಳಾರಿ ಗೆಜೆಟ್‌ನಲ್ಲಿ ದಾಖಲಾಗಿದೆ. ಹೀಗೆ ಅಗಣಿತ ಮಹಿಮೆಗಳನ್ನು ಹೊಂದಿದ ರಾಯರ ಕೆಲವು ಅಪರೂಪದ ಪವಾಡ ಸದೃಶ್ಯ ಘಟನೆಗಳನ್ನು ಸಂಗೀತ ರೂಪಕದಲ್ಲಿ ದೃಶ್ಯೀಕರಣಗೊಂಡಿವೆ. ಶ್ರೀ ಗುರು ರಾಯರ ಮಂತ್ರಾಕ್ಷತೆಯ ಮಹಿಮೆಯನ್ನು ಸಾರುವ ಸ್ವಾಮಿರಾಯರ ಘಟನೆ, ವಿಕಲಚೇತನ ನೃತ್ಯಗಾರ್ತಿ ಮತ್ತೆ ಗುಣಮುಖಳಾಗುವುದು ಹೀಗೆ ಅನೇಕ ಮನೋಜ್ಞ ಘಟನೆಗಳು ಭಾವಪೂರ್ಣವಾಗಿ ಮೂಡಿಬಂದಿವೆ.

ಹಿರಿಯ ರಂಗಕರ್ಮಿಗಳಾದ ಫಣೀಂದ್ರಾಚಾರ್ಯ ದ್ಯಾಮೇನಹಳ್ಳಿ ಈ ನಾಟಕವನ್ನು ರಚಿಸಿ, ನಿರ್ದೇಶಿಸಿ, ಸಂಗೀತ ಸಂಯೋಜನೆ ಮಾಡಿದ್ದಾರೆ. ಇಡೀ ನಾಟಕದಲ್ಲಿ ರಾಘವೇಂದ್ರ ಸ್ವಾಮಿಗಳಾಗಿ ಹಿರಿಯ ರಂಗಭೂಮಿ ಕಲಾವಿದ ಹಾಗೂ ಪತ್ರಕರ್ತ ಮೌನೇಶ ಬಡಿಗೇರ ಪ್ರೇಕ್ಷಕರ ಹೃನ್ಮನ ಸೂರೆಗೊಳ್ಳುತ್ತಾರೆ. ಭಾವುಕ ಭಕ್ತರ ಕಣ್ಣುಗಳಲ್ಲಿ ಆನಂದಾಶ್ರುಗಳು ಬರುವಂತೆ ರಾಯರ ವೃಂದಾವನಸ್ಥರಾಗಿ ಘಟನೆಗಳು ಅಭಿನಯದಲ್ಲಿ ಅವರ ಪಕ್ವತೆಯನ್ನು ಸೂಚಿಸುತ್ತವೆ. ಹಿರಿಯ ಕಲಾವಿದ ಹಾಗೂ ವಿಭೂತಿ ಮಾಸಪತ್ರಿಕೆ ಸಂಪಾದಕ ಅಂದಾನಪ್ಪ ವಿಭೂತಿ ವಿಜಯದಾಸರಾಗಿ ಭಾವಪೂರ್ಣ ಅಭಿನಯ ನೀಡಿದ್ದಾರೆ. ಅಪ್ಪಣ್ಣಾಚಾರ್ಯರಾಗಿ ಮುರಳೀಧರ ಸಂಕನೂರ ಸಹಜಾಭಿನಯವನ್ನು ಪ್ರಸ್ತುತಪಡಿಸಿದರೆ, ರಾಕ್ಷಸನಾಗಿ ಅನಘಾ ಕುಲಕರ್ಣಿ, ಸ್ವಾಮಿರಾಯರಾಗಿ ಅಧ್ಯಾಪಕರಾದ ವಿಶ್ವನಾಥ ಬೇಂದ್ರೆ ಪ್ರೇಕ್ಷಕರ ಮೊಗದಲ್ಲಿ ನಗು ಮೂಡಿಸುತ್ತಾರೆ. ಮೇಜರ್ ಮನ್ರೊನಾಗಿ ಉಜ್ವಲ ಕಬಾಡಿ ಗಮನ ಸೆಳೆಯುತ್ತಾರೆ.

ಇನ್ನುಳಿದಂತೆ ಅಪ್ಪಾವರಾಗಿ ಡಾ. ಗಿರೀಶ ಬಡಿಗೇರ, ನವಾಬರಾಗಿ ಅವನಿ ಕುಲಕರ್ಣಿ, ಆನಂದ ದಾಸರಾಗಿ ಶುಭಾಂಗಿ ದ್ಯಾಮೇನಹಳ್ಳಿ, ವಾದೀಂದ್ರರಾಗಿ ಮಹೇಶ ಸಂದಿಗೂಡು, ಸಹಾಯಕರಾಗಿ ಶ್ರದ್ಧಾ ಕಬಾಡಿ, ವೆಂಕಣ್ಣನಾಗಿ ಸುರಭಿ ಮಹಾಶಬ್ದಿ ಮಂಚಲಮ್ಮನಾಗಿ ರಕ್ಷಿತಾ ಕುಲಕರ್ಣಿ, ಭಾಗಣ್ಣನಾಗಿ ಸಂಜನಾ ದೀಪಾಲಿ, ಜಗನ್ನಾಥದಾಸರಾಗಿ ಯಶೋಧಾ ಗುಮಾಸ್ತ, ಅರ್ಚಕರಾಗಿ ಸನತ್ ದೀಪಾಲಿ, ವಿಕಲಚೇತನ ನೃತ್ಯಗಾರ್ತಿಯಾಗಿ ಅನ್ವಿತಾ, ಕೃಷ್ಣನಾಗಿ ರಂಜಿತಾ ಕುಲಕರ್ಣಿ ನವಾಬನ ಸೇವಕನಾಗಿ ಅಪೇಕ್ಷಾ ತಮ್ಮ ಪಾತ್ರಗಳಿಗೆ ನ್ಯಾಯ ಒದಗಿಸಿದ್ದಾರೆ.

ಈ ಸಂಗೀತ ರೂಪಕಕ್ಕೆ ಸುಮಧ್ವ ದ್ಯಾಮೇನಹಳ್ಳಿ ಬೆಳಕು ಸಂಯೋಜಿಸಿದ್ದಾರೆ. ತೇರದಾಳ ತಬಲಾ ಸಾಥ್ ನೀಡಿದರೆ, ರಂಗಪ್ಪ ಹುಯಿಲಗೋಳ ಹಾಗೂ ಶ್ರೀನಿವಾಸ ಹಡಪದ ಪ್ರಸಾದನ ಕಾರ್ಯದಲ್ಲಿ ಅಚ್ಚುಕಟ್ಟುತನವಿದೆ. ಕಲಾವಿದ ಮಹೇಶ ಸಂದಿಗೋಡು ರಂಗಪರಿಕರಗಳನ್ನು ನಿರ್ಮಿಸಿದ್ದಾರೆ.

ಫಣೀಂದ್ರಾಚಾರ್ಯರ ನಾಟಕಗಳ ವಿಶೇಷತೆಯೆಂದರೆ ನಾಟಕದ ವಿಷಯ ವಸ್ತು ಗಂಭೀರ ಧಾರ್ಮಿಕ ಸಂಗತಿಗಳನ್ನು ಹೊಂದಿದ್ದರೂ ಅದಕ್ಕೆ ಸದಭಿರುಚಿಯ ಹಾಸ್ಯದ ಲೇಪನ, ದಾಸರಪದಗಳ ಔಚಿತ್ಯಪೂರ್ಣ ಬಳಕೆ, ಚಿಕ್ಕವೇದಿಕೆಯಲ್ಲಿ ಚೊಕ್ಕ ಮತ್ತು ಕಲಾಪೂರ್ಣ ರಂಗಸಜ್ಜಿಕೆ ಬೆಳಕು ವಿನ್ಯಾಸವನ್ನು ಯಥಾಯೋಗ್ಯ ರೀತಿಯಲ್ಲಿ ನಿರ್ಮಿಸಿ ಬಾಲಕಲಾವಿದರನ್ನು ಪೋಷಕ ಪಾತ್ರಗಳಿಗೆ ಬಳಿಸಿ ಅತ್ಯಂತ ಸಮರ್ಥ ರೀತಿಯಲ್ಲಿ ಭಕ್ತಿಭಾವಗಳನ್ನು ಪ್ರೇಕ್ಷಕರನ್ನು ಉದ್ದೀಪಸುವಂಥ ಸಂಗೀತರೂಪಕ ಪ್ರದರ್ಶಿಸಿದ್ದಾರೆ. ಹೀಗಾಗಿ ಫಣೀಂದ್ರಾಚಾರ್ಯರು ಹಾಗೂ ಎಲ್ಲ ಕಲಾವಿದರಿಗೆ ನಾಟಕಾಸಕ್ತರ ವಿಶೇಷ ಅಭಿನಂದನೆ ಸಲ್ಲಲೇಬೇಕು.

**– ಡಾ. ದತ್ತಪ್ರಸನ್ನ ಪಾಟೀಲ.**
ಕಲಾವಿಮರ್ಶಕರು, ಗದಗ.

### ಸರಕಾರಿ ಶಾಲೆ, ಆಯಕಟ್ಟಿನ ಸ್ಥಳಗಳಲ್ಲಿ ಸಿ.ಸಿ ಕ್ಯಾಮರಾ ಅಳವಡಿಸಲು ಒತ್ತಾಯ

# ಲಕ್ಕುಂಡಿಯಲ್ಲಿ ಗ್ರಾಮ ಸಭೆ ಯಶಸ್ವಿ

■ **ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ರೈತರು ತಾವು ಬೆಳೆದ ಫಸಲನ್ನು ರಾಶಿ ಮಾಡುವುದು, ಗ್ರಾಮದಲ್ಲಿ ಹರಿದು ಹೋಗುವ ಮಳೆ ನೀರನ್ನು ಸಂಗ್ರಹಿಸಲು ಕೆರೆ ನಿರ್ಮಾಣ, ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೇರಿಸುವುದು, ಕೃಷಿ ಚಟುವಟಿಕೆ ರಸ್ತೆ ಸುಧಾರಣೆ ಸೇರಿದಂತೆ ಹಲವಾರು ಪ್ರಮುಖ ವಿಷಯಗಳನ್ನು ಗ್ರಾಮ ಸಭೆಯಲ್ಲಿ ಸುದೀರ್ಘವಾಗಿ ಚರ್ಚಿಸಿ ಅನುಮೋದನೆ ಪಡೆಯಲಾಯಿತು.

ರೈತರ ಫಸಲು ರಾಶಿ ಮಾಡಲು ಈಗ ರೈತರು ರಾಷ್ಟ್ರೀಯ ಹೆದ್ದಾರಿಯನ್ನೇ ಅವಲಂಬಿಸಿದ್ದು ಇದು ಅಪಾಯಕಾರಿಯಾಗಿದೆ. ಇದಕ್ಕೆ ಕನಿಷ್ಠ 5 ಎಕರೆ ಜಮೀನು ಖರೀದಿಸಿ ಸಿ.ಸಿ ರಸ್ತೆಯನ್ನಾಗಿ ರೂಪಿಸಿ ಖಣವನ್ನಾಗಿ ಮಾಡಬೇಕೆಂದು ರೈತರು ಒತ್ತಾಯಿಸಿದರು. ಗ್ರಾಮದಲ್ಲಿ ಕಳ್ಳತನವನ್ನು ತಪ್ಪಿಸಲು ಮತ್ತು ಶಾಲಾ ಮೈದಾನದಲ್ಲಿ ಕಿಡಿಗೇಡಿಗಳ ಅಸಭ್ಯ ವರ್ತನೆ ತಪ್ಪಿಸಲು ಸಿ.ಸಿ ಕ್ಯಾಮರಾ ಅಳವಡಿಸಲು ಗ್ರಾ.ಪಂ ಕ್ರಿಯಾ ಯೋಜನೆ ರೂಪಿಸಬೇಕು



ಇತ್ಯಾದಿ ವಿಷಯಗಳ ಕುರಿತು ಚರ್ಚೆಗಳಾದವು.

ಅಧ್ಯಕ್ಷತೆ ವಹಿಸಿದ್ದ ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ಮಾತನಾಡಿ, ಗ್ರಾಮದ ಅಭಿವೃದ್ಧಿಗಾಗಿ ಚರ್ಚೆ ಮಾಡಿದ್ದು ಸ್ವಾಗತಾರ್ಹವಾಗಿದೆ. ಈಗಾಗಲೇ ಅನುದಾನ ಬಿಡುಗಡೆಯಾದ ಪಶು ಚಿಕಿತ್ಸಾಲಯ, ಸಮುದಾಯ ಆರೋಗ್ಯ ಕೇಂದ್ರ ಮೇಲ್ದರ್ಜೆಗೇರಿಸಿ, ನಾಡ ಕಾರ್ಯಾಲಯ ತೆರೆಯಬೇಕು. ಇಲ್ಲಿ ನಡೆದ ಪ್ರತಿಯೊಂದು ವಿಷಯದ ಚರ್ಚೆಯ ವರದಿಯನ್ನು ಸರಕಾರಕ್ಕೆ ಕಳಿಸಬೇಕು ಎಂದು ಸೂಚಿಸಿದರು. ಪಿ.ಡಿ.ಓ ಅಮೀರ ನಾಯಕ ಪ್ರಾಸ್ತಾವಿಕವಾಗಿ ಮಾತನಾಡಿ, 11 ವಾರ್ಡ್‌ಗಳ ಅಭಿವೃದ್ಧಿ ಮಾಡಬೇಕಾದ ವಿಷಯಗಳ ಚರ್ಚೆಯನ್ನು ಸಭೆಗೆ ತಿಳಿಸಿ ಅನುಮೋದನೆ ಪಡೆದರು. ಗ್ರಂಥಾಲಯ, ಸ್ಮಶಾನ, ಆರೋಗ್ಯ, ಕೃಷಿ, ತೋಟಗಾರಿಕೆ, ಶಿಕ್ಷಣ, ವಿದ್ಯುತ್, ಸಾರಿಗೆ, ಸಂಜೀವಿನಿ ಒಕ್ಕೂಟ, ಸಮುದಾಯ ಭವನ ಸೇರಿದಂತೆ ಹಲವಾರು ವಿಷಯಗಳ ಕುರಿತು ಚರ್ಚಿಸಲಾಯಿತು. ಬಿ.ಇ.ಓ ವಿ.ವಿ. ನಡುವಿನಮನಿ, ಕೃಷಿ ಇಲಾಖೆಯ ಬಸವರಾಜೇಶ್ವರಿ, ಯೋಜನಾಧಿಕಾರಿ ಗೋವಿಂದರೆಡ್ಡಿ, ತೋಟಗಾರಿಕೆ ಇಲಾಖೆಯ ಶಂಭು ನೆಗಳೂರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಶಂಭು ನೆಗಳೂರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ರಾಜೇಶ್ವರಿ ಉಪ್ಪಿನ, ಹೆಸ್ಕಾಂ ಅಧಿಕಾರಿ ದೊಡ್ಡಮನಿ, ಗ್ರಾ.ಪಂ ಸದಸ್ಯರು, ಶಾಲೆಯ ಮುಖ್ಯೋಪಾಧ್ಯಾಯರು ಉಪಸ್ಥಿತರಿದ್ದರು. ಕೆ.ಬಿ. ಜಾನೋಪಂತರ ಸ್ವಾಗತಿಸಿದರು. ಎಂ.ಎ. ಗಾಜಿ ವಂದಿಸಿದರು.

> ಜಿಲ್ಲೆಯಲ್ಲಿ ಪಶು ವೈದ್ಯರ ಕೊರತೆಯಿದ್ದು, 4 ಆಸ್ಪತ್ರೆಗೆ ಒಬ್ಬ ವೈದ್ಯರು ಕಾರ್ಯನಿರ್ವಹಿಸುತ್ತಿದ್ದಾರೆ. ರೈತರ ಜಾನುವಾರಗಳಿಗೆ ಬೇಕಾಗುವ ಔಷಧಿ ಸೇರಿದಂತೆ ಇತರೆ ಸಮಸ್ಯೆಗಳಿಗೆ ನನ್ನ ದೂರವಾಣಿಗೆ ಸಂಪರ್ಕಿಸಬೇಕು.
>
> **– ಡಾ. ಎಚ್.ಎಸ್. ಜನಗಿ.**
> ಪಶು ವೈದ್ಯಾಧಿಕಾರಿ.

> ಕೆಳ ಹಂತದ ಸಮಗ್ರ ಯೋಜನೆಯ ಗ್ರಾಮಾಭಿವೃದ್ಧಿ ಮಾಡುವ ವಿನೂತನ ಪ್ರಯತ್ನ ಇದಾಗಿದ್ದು, ಜನರ ಬೇಡಿಕೆಯೇ ಸರಕಾರದ ಬೇಡಿಕೆಯಾಗಿದೆ. ಈ ನಿಟ್ಟಿನಲ್ಲಿ ಗದಗ ತಾಲೂಕಿನ ಲಕ್ಕುಂಡಿ ಗ್ರಾಮದಲ್ಲಿ ಈ ವಿಶೇಷ ಗ್ರಾಮ ಸಭೆಯ ಮೂಲಕ 5 ವರ್ಷಗಳಲ್ಲಿ ಅಧಿಕ ಅಭಿವೃದ್ಧಿ ಮಾಡಿ ಮಾದರಿಯಾಗಿಸುವ ಕನಸು ಸರಕಾರದ್ದಾಗಿದ್ದು ಗ್ರಾಮಸ್ಥರು ಸಹಕರಿಸಬೇಕು ಎಂದು ತಾ.ಪಂ ಸಹಾಯಕ ನಿರ್ದೇಶಕ ಕುಮಾರ ಪೂಜಾರ ಹೇಳಿದರು.

> 16 ರಾಜ್ಯ ಸಂರಕ್ಷಿತ ಸ್ಮಾರಕಗಳನ್ನು ಪ್ರವಾಸೋದ್ಯಮ ಇಲಾಖೆ ಸಚಿವ ಎಚ್.ಕೆ. ಪಾಟೀಲರ ವಿಶೇಷ ಕಾಳಜಿಯಿಂದ ಅಭಿವೃದ್ಧಿಪಡಿಸಲಾಗುತ್ತಿದೆ. ಗ್ರಾಮಸ್ಥರು ಸಹಾಯ, ಸಹಕಾರ, ತ್ಯಾಗ ಮನೋಭಾವನೆ ಹೊಂದಿ ವಿಶ್ವ ಪರಂಪರೆ ಪಟ್ಟಿಗೆ ಸೇರಿಸಲು ಸಹಕಾರ ನೀಡಬೇಕು
>
> **– ಶರಣು ಗೋಗೇರಿ, ಆಯುಕ್ತರು**
> ಲಕ್ಕುಂಡಿ ಪ್ರಾದೇಶಿಕ ಅಭಿವೃದ್ಧಿ ಪ್ರಾದಿಕಾರ.



ಬೆಟಗೇರಿ ಟೆಂಗಿನಕಾಯಿ ಬಜಾರ್‌ದ ಹುಚ್ಚನಗೌಡ್ರ ಓಣಿಯ ಶ್ರೀ ಮಾಸ್ತದೇವಿ ವಿನಾಯಕ ಸಮಿತಿಯು ಬೆಟಗೇರಿಯ ಬಾಬುರಾವ್ ನರಗುಂದ ಕಲಾವಿದರು ನಿರ್ಮಿಸಿದ 32ನೇ ವರ್ಷದ ಸಾರ್ವಜನಿಕ ಗಣೇಶ. 10ನೇ ದಿನಕ್ಕೆ ಸತ್ಯನಾರಾಯಣ ಪೂಜೆ, ಮಹಾಪ್ರಸಾದ, 11ನೇ ದಿನಕ್ಕೆ ಗಣೇಶ ವಿಸರ್ಜನೆಗೊಳ್ಳುವದು.

## ವಿಶ್ವಕರ್ಮ ಜಯಂತಿ; ಸೆ.2ರಂದು ಪೂರ್ವಭಾವಿ ಸಭೆ

■ **ವಿಜಯಸಾಕ್ಷಿ ಸುದ್ದಿ, ಗದಗ**

ಸರ್ಕಾರದ ಆದೇಶದನ್ವಯ ಈ ವರ್ಷವು ಸೆಪ್ಟೆಂಬರ್ 17 ರಂದು ಆಚರಿಸಲಾಗುವ ಭಗವಾನ್ ಶ್ರೀ ವಿಶ್ವಕರ್ಮ ಜಯಂತಿ ನಿಮಿತ್ತ ಸೆಪ್ಟೆಂಬರ್ 2 ರಂದು ಮಂಗಳವಾರ ಮಧ್ಯಾಹ್ನ:12.00 ಗಂಟೆಗೆ ಅಪರ ಜಿಲ್ಲಾಧಿಕಾರಿಗಳು, ಗದಗ ಇವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಕರೆಯಲಾಗಿದೆ. ಸಭೆಗೆ ಹಾಜರಾಗಿ ಸಲಹೆ/ಅಭಿಪ್ರಾಯ ನೀಡಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಈದ್ ಮಿಲಾದ್‌ಗೆ ಇಲ್ಲ ಡಿಜೆ

▶▶ ಮೊದಲನೇ ಪುಟದಿಂದ

ಸುದ್ದಿಗೋಷ್ಠಿಯಲ್ಲಿ ಮೌಲಾನಾ ಅಬ್ದುಲ್ ರಹೀಮ್, ಶಬ್ಬಿರಅಹಮದ್, ಯೂಸೂಫ್ ಸಾಬ್ ನಮಾಜಿ, ಮಹೆಬೂಬ್ ನದಾಫ್, ಮುನ್ನಾ ರಷ್ಮೀ, ಮುನ್ನಾ ಶೇಖ್, ಉಮರ್ ಫಾರೂಖ್ ಹುಬ್ಬಳ್ಳಿ, ಮಹಮ್ಮದ್ ಶಾಲಗಾರ, ಅಬ್ದುಲ್ ಮುನಾಫ್ ಮುಲ್ಲಾ ಮುಂತಾದವರು ಉಪಸ್ಥಿತರಿದ್ದರು.

# ರೈತರಿಂದ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಕೃಷಿ ಇಲಾಖೆಯ ಆತ್ಮ ಯೋಜನೆಯಡಿ 2025–26ನೇ ಸಾಲಿಗೆ ಜಿಲ್ಲಾ ಮತ್ತು ತಾಲೂಕು ಮಟ್ಟದ ಶ್ರೇಷ್ಠ ಕೃಷಿಕ ಪ್ರಶಸ್ತಿಗೆ ಜಿಲ್ಲೆಯ ರೈತ ಮತ್ತು ರೈತ ಮಹಿಳೆಯರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು,

ಆಸಕ್ತ ರೈತರು ಅರ್ಜಿಗಳನ್ನು ತಮ್ಮ ತಾಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯಲ್ಲಿ ಪಡೆದು ದಿನಾಂಕ 18–09–2025 ರೊಳಗಾಗಿ ನಿಗದಿತ ಅರ್ಜಿ ನಮೂನೆಯಲ್ಲಿ ಸಂಪೂರ್ಣ ಮಾಹಿತಿಯನ್ನು ದಾಖಲಾತಿಗಳೊಂದಿಗೆ ಸಂಬಂಧಿಸಿದ ತಾಲೂಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿಯಲ್ಲಿ ಸಲ್ಲಿಸಲು ಜಂಟಿ ಕೃಷಿ ನಿರ್ದೇಶಕರು ಹಾಗೂ ಯೋಜನಾ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ರೈತ ಸಂಪರ್ಕ ಕೇಂದ್ರ ಅಥವಾ ತಾಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯಲ್ಲಿ ಸಂಪರ್ಕಿಸಲು ಕೋರಿದೆ.

### ಅಮೂಲ್ಯ ವಿಶೇಷ ದತ್ತು ಸ್ವೀಕಾರ ಕೇಂದ್ರದಿಂದ ಕೇರಳಕ್ಕೆ ತೆರಳಿದ ದತ್ತು ಮಗು

# ಮಕ್ಕಳಿಲ್ಲದ ದಂಪತಿಗೆ ಮಗು ಹಸ್ತಾಂತರ

■ ವಿಜಯಸಾಕ್ಷಿ ಸುದ್ದಿ, ಗದಗ

ಮಕ್ಕಳಿಲ್ಲದ ದಂಪತಿಗೆ ಮಗುವೊಂದನ್ನು ಹಸ್ತಾಂತರಿಸುವದು ಪುಣ್ಯದ ಕಾರ್ಯ. ಹೃದಯಸ್ಪರ್ಶಿ ಹಾಗೂ ಭಾವುಕತನವನ್ನು ಉಂಟುಮಾಡುವ ಈ ಸನ್ನಿವೇಶ ಮಾನವೀಯ ಸಂಬಂಧವನ್ನು ಬೆಸೆಯುವಂತಿದೆ ಎಂದು ನಗರದ ಬಾಲವಿನಾಯಕ ವಿದ್ಯಾನಿಕೇತನ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಎಸ್. ರವಿ ಹೇಳಿದರು.

ಅವರು ಶುಕ್ರವಾರ ಬೆಟಗೇರಿಯ ಸೇವಾ ಭಾರತಿ ಸಂಸ್ಥೆಯ ಅಮೂಲ್ಯ ವಿಶೇಷ ದತ್ತು ಸ್ವೀಕಾರ ಕೇಂದ್ರದಲ್ಲಿ ಪೋಷಣೆಗೊಂಡ ಮಗುವನ್ನು ಕೇರಳದ ಮಕ್ಕಳಿಲ್ಲದ ದಂಪತಿಗೆ ದತ್ತು ಮಗುವಾಗಿ ಹಸ್ತಾಂತರಿಸಿ ಮಾತನಾಡಿದರು.

ಎಲ್ಲಿಯೋ ಜನಿಸಿದ ಅಲಕ್ಷಿತ ಮಗುವನ್ನು ದತ್ತು ಸ್ವೀಕಾರ ಸಂಸ್ಥೆಯೊಂದು ಸಂರಕ್ಷಿಸಿ ಪೋಷಣೆ ಮಾಡಿ, ಕಾನೂನು ಪ್ರಕಾರ ಮಕ್ಕಳಿಲ್ಲದ ದಂಪತಿಗೆ ಹಸ್ತಾಂತರಿಸುವ ಮೂಲಕ ಆ ಮಗುವಿಗೆ ಭವ್ಯ ಭವಿಷ್ಯವನ್ನು ರೂಪಿಸುವದು ಒಂದೆಡೆಯಾದರೆ, ಮಕ್ಕಳಿಲ್ಲದ ಕೊರಗಿನಲ್ಲಿರುವ ದಂಪತಿಯ ಮಡಿಲಿಗೆ ಇಂತಹ ಮಗುವನ್ನು ಹಸ್ತಾಂತರಿಸುವದು ನಿಜಕ್ಕೂ ಪುಣ್ಯಪ್ರಾಪ್ತಿಯ ಮಹತ್ಕಾರ್ಯವಾಗಿದೆ ಎಂದರು.

ದೇವರ ಆಜ್ಞೆ, ಅನುಗ್ರಹದಿಂದಾಗಿ ಈ ದತ್ತು ಕಾರ್ಯ ಪೂರ್ಣಗೊಳ್ಳುತ್ತದೆ. ದೇವರು ವ್ಯಕ್ತಿಯ ಮೂಲಕ ಇಂತಹ ಕಾರ್ಯ ಸಾಕಾರಗೊಳ್ಳಲು ಆಶೀರ್ವದಿಸಿದ ಫಲದಿಂದಾಗಿ ಇಂತಹ ಕಾರ್ಯಗಳು ನಿರ್ವಿಘ್ನವಾಗಿ ಯಶಸ್ವಿಗೊಳ್ಳುವವು ಎಂದರಲ್ಲದೆ, ಮಗುವನ್ನು ಪಡೆದ ದಂಪತಿ ಈ ಮಗುವಿಗೆ ಉತ್ತಮ ಸಂಸ್ಕಾರ, ಶಿಕ್ಷಣ, ಭವಿಷ್ಯ ನೀಡಲಿ ಎಂದರು.

ಅಧ್ಯಕ್ಷತೆಯನ್ನು ಸಂಸ್ಥೆಯ ಅಧ್ಯಕ್ಷ ಮಲ್ಲಿಕಾರ್ಜುನ ಬೆಲ್ಲದ ವಹಿಸಿದ್ದರು. ವೇದಿಕೆಯ ಮೇಲೆ ಮಲ್ಲಿಕಾ ಉಪಸ್ಥಿತರಿದ್ದರು. ದತ್ತು ಮಗುವನ್ನು ಪಡೆದುಕೊಂಡ ಕೇರಳದ ಶಿವಕುಮಾರ ದಂಪತಿ ತಮಗೆ ಮಗುವನ್ನು ದತ್ತುವಾಗಿ ನೀಡಿದ್ದು ನಮ್ಮ ಮನೆ–ಮನ ಬೆಳಗಿದಂತಾಗಿದೆ. ಮಗುವಿಗೆ ಉತ್ತಮ ಭವಿಷ್ಯ ನೀಡುವುದಾಗಿ ಹೇಳಿದರಲ್ಲದೆ, ಸಂಸ್ಥೆಯ ಕಾರ್ಯವನ್ನು ಬಣ್ಣಿಸಿದರು.

ನಾಗವೇಣಿ ಕಟ್ಟಿಮನಿ ಪ್ರಾರ್ಥಿಸಿದರು, ನರಸಿಂಹ ಕಾಮಾರ್ತಿ ಪರಿಚಯಿಸಿದರು. ಮಂಜುನಾಥ ಚನ್ನಪ್ಪನವರ ಪ್ರಾಸ್ತಾವಿಕವಾಗಿ ಮಾತನಾಡಿದರು. ಅರುಣ ರಾಜಪುರೋಹಿತ ನಿರೂಪಿಸಿದರು. ಕೊನೆಗೆ ರಾಜೇಶ ಖಟವಟೆ ವಂದಿಸಿದರು.

ಕಾರ್ಯಕ್ರಮದಲ್ಲಿ ಬಸವರಾಜ ನಾಗಲಾಪೂರ, ಲಲಿತ್ ಜೈನ್, ಗಣೇಶ ಮಾಗುಂಡ, ಬಸವರಾಜ ಪಟ್ಟಣಶೆಟ್ಟಿ, ಪ್ರಮೋದ ಹಿರೇಮಠ, ಶ್ರೀಧರ ಕಾಂಬಳೆ, ಅಭಿಷೇಕ ಮಾಳೋದೆ, ಜ್ಯೋತಿ ಸಂಗಮದ ಸೇರಿದಂತೆ ದತ್ತು ಕೇಂದ್ರದ ಆಯಾಗಳು ಪಾಲ್ಗೊಂಡಿದ್ದರು.




ಇನ್ನೋರ್ವ ಮುಖ್ಯ ಅತಿಥಿ ರಾಷ್ಟ್ರೀಯ ಸ್ವಯಂ ಸೇವಾ ಸಂಘದ ಪ್ರಾಂತ ಪ್ರಚಾರಕರಾದ ನರೇಂದ್ರ ಜೀ ಮಾತನಾಡಿ, ಅಮೂಲ್ಯ ದತ್ತು ಕೇಂದ್ರವು ಮನುಷ್ಯತ್ವ ಮತ್ತು ಮಾನವೀಯ ಕಾರ್ಯಕ್ಕೆ ತನ್ನನ್ನು ಸಮರ್ಪಿಸಿಕೊಂಡಿದೆ.

ಇದುವರೆಗೂ 68 ಮಕ್ಕಳಿಗೆ ಬದುಕು ನೀಡುವಲ್ಲಿ ತನ್ನದೇ ಆದ ಅಮೂಲ್ಯ ಸೇವೆಯನ್ನು ಸಲ್ಲಿಸುತ್ತ ಮುನ್ನಡೆದಿರುವ ಅಮೂಲ್ಯ ಸಂಸ್ಥೆಯ ಕಾರ್ಯ ನಿಜಕ್ಕೂ ಶ್ಲಾಘನೀಯ ಎಂದು ಬಣ್ಣಿಸಿದರು.

# ವಿದ್ಯಾರ್ಥಿಗಳು ಮೌಲ್ಯಾಧಾರಿತ ಬದುಕು ನಡೆಸಿ



■ ವಿಜಯಸಾಕ್ಷಿ ಸುದ್ದಿ, ಗದಗ

ಶಾಲೆಗಳು ಮಕ್ಕಳಲ್ಲಿ ಮನೋಸ್ಥೈರ್ಯವನ್ನು ಮೂಡಿಸುತ್ತವೆ. ವಿದ್ಯಾರ್ಥಿ ಜೀವನದಲ್ಲಿ ಸಿಗುವ ಉತ್ತಮ ಅವಕಾಶಗಳನ್ನು ಸದ್ಬಳಕೆ ಮಾಡಿಕೊಂಡು ನಿರ್ದಿಷ್ಟ ಗುರಿಯೊಂದಿಗೆ ಸಾಧನೆಯ ಹಾದಿಯಲ್ಲಿ ಸಾಗಬೇಕು. ತಮ್ಮ ಮುಂದಿನ ಭವಿಷ್ಯಕ್ಕಾಗಿ ಉತ್ತಮ ಜೀವನ ಮೌಲ್ಯಗಳನ್ನು ತಿಳಿದು ಮೌಲ್ಯಾಧಾರಿತ ಬದುಕು ತಮ್ಮದಾಗಿಸಿಕೊಳ್ಳಬೇಕೆಂದು ಕವಿತಾ ಬೇಲೇರಿ ಹೇಳಿದರು.

ಅವರು ಬೆಟಗೇರಿಯ ಕುರಹಟ್ಟಿಪೇಟೆಯ ಸರ್ಕಾರಿ ಉರ್ದು ಪ್ರಾಥಮಿಕ ಹೆಣ್ಣು ಮಕ್ಕಳ ಶಾಲೆ ನಂ.1 ರಲ್ಲಿ ಜರುಗಿದ 'ಮೌಲ್ಯ ಶಿಕ್ಷಣ' ಕುರಿತು ತಿಳುವಳಿಕೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಶಾಲಾ ಮಕ್ಕಳಿಗೆ ಇಲಾಖೆ ಕೊಡಮಾಡುವ ಶೂ–ಸಾಕ್ಸ್ ವಿತರಿಸಿ ಮಾತನಾಡಿದರು.

ವಿದ್ಯಾರ್ಥಿಗಳು ಶಿಕ್ಷಕರು ಹಾಗೂ ಪೋಷಕರೊಂದಿಗೆ ಆತ್ಮೀಯ ಸಂಬಂಧ ಹೊಂದಿರಬೇಕು. ಹಿರಿಯರ ಬುದ್ಧಿ ಮಾತುಗಳನ್ನು ಕೇಳಿ ತಿಳಿದುಕೊಳ್ಳಬೇಕು. ಕಲಿತ ಶಾಲೆಗೂ, ಹೆತ್ತವರಿಗೂ ಕೀರ್ತಿ ತರಬೇಕು. ಸಮಾಜವು ಗುರುತಿಸಿ ಗೌರವಿಸುವಂತಾಗಬೇಕು. ಕಲಿಕೆಯು ನಿರಂತರ ಪ್ರಕ್ರಿಯೆಯಾಗಿದ್ದು, ಉತ್ತಮ ಪುಸ್ತಕಗಳನ್ನು ಓದುವ ಹವ್ಯಾಸ ರೂಢಿಸಿಕೊಳ್ಳಬೇಕು. ಇದರಿಂದ ಜ್ಞಾನದ ವಿಕಾಸ ಆಗುವುದು ಎಂದರು.

ಅಧ್ಯಕ್ಷತೆ ವಹಿಸಿದ್ದ ಶಾಲಾ ಎಸ್.ಡಿ.ಎಂ.ಸಿ ಅಧ್ಯಕ್ಷೆ ಅಪ್ಸಾನಾ ಈಟಿ ಮಾತನಾಡಿ, ಸರ್ಕಾರಿ ಶಾಲೆಗಳಲ್ಲಿ ಮಕ್ಕಳಿಗೆ ಅನೇಕ ಸೌಲಭ್ಯಗಳು ಲಭ್ಯವಿದ್ದು, ಅವುಗಳನ್ನು ಸದುಪಯೋಗಪಡಿಸಿಕೊಳ್ಳಬೇಕು. ಉತ್ತಮ ಗುಣಮಟ್ಟದ ಶಿಕ್ಷಣ, ಉತ್ತಮ ಕಲಿಕೆ ಇಲ್ಲಿ ಕಂಡುಬರುತ್ತದೆ. ನಾವೆಲ್ಲರೂ ಮಕ್ಕಳನ್ನು ಸರ್ಕಾರಿ ಶಾಲೆಗೆ ದಾಖಲಿಸುವ ಮೂಲಕ ಸರ್ಕಾರಿ ಶಾಲೆಗಳ ಸಬಲೀಕರಣಕ್ಕೆ ಮುಂದಾಗಬೇಕು ಎಂದರು.

ಶಾಲಾ ಮುಖ್ಯೋಪಾಧ್ಯಾಯೆ ಎಸ್.ಎಂ. ಹುಲ್ಲೂರ ಮಾತನಾಡಿ, ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಯೇ ನಮ್ಮೆಲ್ಲರ ಗುರಿಯಾಗಿದೆ. ಮಕ್ಕಳು ಇಲ್ಲಿ ಸಿಗುವ ಸೌಲಭ್ಯದೊಂದಿಗೆ ಓದು–ಬರಹದಲ್ಲಿ ಯಶಸ್ಸು ಪಡೆಯಬೇಕು. ಸರ್ಕಾರಿ ಶಾಲೆಗಳು ಮಕ್ಕಳ ಅಭಿವೃದ್ಧಿಯ ಕೇಂದ್ರಗಳಾಗಿವೆ ಎಂದರು.

ವಿದ್ಯಾರ್ಥಿಗಳು ಸಾಮೂಹಿಕವಾಗಿ ಪ್ರಾರ್ಥಿಸಿದರು. ಶಿಕ್ಷಕ ಎಂ.ಎಚ್. ಲಕ್ಮಾಪೂರ ಸ್ವಾಗತಿಸಿದರು. ಎಂ.ಎಫ್. ನಾಯಕ್ ನಿರೂಪಿಸಿ ವಂದಿಸಿದರು.

### 'ಜೀವಮಾನ ಸಾಧನೆ ಪ್ರಶಸ್ತಿ' ಪುರಸ್ಕೃತ ಚಂದ್ರು ಬಾಳಿಹಳ್ಳಿಮಠರಿಗೆ ಸನ್ಮಾನ

# ಸಾಧನೆಗೆ ಪರಿವಾರದ ಕೊಡುಗೆ ದೊಡ್ಡದು

■ ವಿಜಯಸಾಕ್ಷಿ ಸುದ್ದಿ, ಗದಗ

ಸಾಮಾಜಿಕ, ಧಾರ್ಮಿಕ ಹಾಗೂ ವಾಣಿಜ್ಯ ಕ್ಷೇತ್ರದಲ್ಲಿ ಸೂರ್ಯ–ಚಂದ್ರರಂತೆ ಮಿಂಚಿ ಎಲ್ಲರ ಮನ ತಣಿಸಿದ ಅಪರೂಪದಲ್ಲಿಯೇ ಅಪರೂಪವೆನಿಸಿದವರು ಸಮಾಜ ಸೇವಾಕರ್ತ ಚಂದ್ರು ಬಾಳಿಹಳ್ಳಿಮಠರು ಎಂದು ವಾಯವ್ಯ ಸಾರಿಗೆ ನಿಗಮದ ನಿವೃತ್ತ ವಿಭಾಗೀಯ ನಿಯಂತ್ರಣಾಧಿಕಾರಿ ಎಫ್.ಸಿ. ಹಿರೇಮಠ ಅಭಿಪ್ರಾಯಪಟ್ಟರು.

ಅವರು ಶನಿವಾರ ಚಂದ್ರು ಬಾಳಿಹಳ್ಳಿಮಠರು 'ಜೀವಮಾನ ಸಾಧನೆ ಪ್ರಶಸ್ತಿ' ಪಡೆದ ನಿಮಿತ್ತ ಹಮ್ಮಿಕೊಂಡಿದ್ದ ಸನ್ಮಾನ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದರು.

ಅತಿ ದೊಡ್ಡ ಸಂಪತ್ತು ಎಂದರೆ ಬುದ್ಧಿವಂತಿಕೆ. ಅಮೂಲ್ಯ ಆಭರಣವೆಂದರೆ ತಾಳ್ಮೆ, ಅತ್ಯಂತ ಉತ್ತಮವಾದುದೆಂದರೆ ಮುಂದಾಲೋಚನೆ. ಉತ್ತಮ ಔಷಧಿ ಎಂದರೆ ನಗು. ಇವೆಲ್ಲವನ್ನೂ ಮೇಳೈಸಿದ ವ್ಯಕ್ತಿತ್ವವೇ ಚಂದ್ರು ಬಾಳಿಹಳ್ಳಿಮಠ ಅವರದು. ಸಾಮಾನ್ಯರಲ್ಲಿ ಸಾಮಾನ್ಯರಂತೆ ಬೆರೆತು ಹೋಗುವ ಗುಣವೇ ಜೀವಮಾನ ಸಾಧನೆ ಪ್ರಶಸ್ತಿ ಬರಲು ಮುಖ್ಯ ಕಾರಣ. ಅವರ ಪ್ರತಿ ಸಾಧನೆಗೂ ಬಾಳಿಹಳ್ಳಿಮಠ ಪರಿವಾರದ ಕೊಡುಗೆ ದೊಡ್ಡದು ಎಂದರು. ಸನ್ಮಾರ್ಗ ಪ.ಪೂ ಮಹಾವಿದ್ಯಾಲಯದ ಆಡಳಿತಾಧಿಕಾರಿ ಎಮ್.ಸಿ. ಹಿರೇಮಠ ಮಾತನಾಡಿ, ಪ್ರತಿ ಕುಟುಂಬಕ್ಕೂ ಕನಿಷ್ಠ ಮೂವರು ಮಕ್ಕಳಿರಬೇಕಂತೆ. ಸೈನ್ಯಕ್ಕಾಗಿ ಒಬ್ಬರು, ಸಮಾಜ ಸೇವೆಗಾಗಿ ಒಬ್ಬರು ಹಾಗೂ ಮತ್ತೋರ್ವರು ಮನೆತನ ಮುಂದುವರೆಸಿಕೊಂಡು ಹೋಗುವದಕ್ಕಾಗಿ ಎಂದು ನಮ್ಮ ಹಿರಿಯರು ಹೇಳಿದಂತೆ ಚಂದ್ರು ಬಾಳಿಹಳ್ಳಿಮಠರು ಚಿಕ್ಕಂದಿನಲ್ಲಿಯೇ ಸ್ವಾವಲಂಬಿಯಾಗಿ, ಸಮಾಜಮುಖಿಯಾಗಿ ಅತ್ಯುತ್ತಮ ವ್ಯಾಪಾರಿಗಳಾಗಿ ಜನರೊಡನೆಯೇ ಬೆಳೆದವರು. ಸಾಮಾಜಿಕ ಧಾರ್ಮಿಕ, ಶೈಕ್ಷಣಿಕ ಕಾರ್ಯಕ್ರಮಗಳನ್ನು ಅಚ್ಚುಕಟ್ಟಾಗಿ ಆಯೋಜಿಸಿ, ಸಂಘಟಿಸುವುದು ಇವರ ಜಾಣ್ಮೆಯ ಪ್ರತೀಕ ಎಂದು ಅಭಿಪ್ರಾಯಪಟ್ಟರು.

ಬಾಳಿಹಳ್ಳಿಮಠ ಮನೆತನದ ವೀಣಾ ಪ್ರಸನ್ನ ಪ್ರಾಸಂಗಿಕವಾಗಿ ಮಾತನಾಡುತ್ತಾ, ನಮ್ಮ ಕುಟುಂಬವೇ ಹೆಮ್ಮೆ ಪಡುವಂತಹ ಸಾಧನೆಯನ್ನು ಚಂದ್ರು ಬಾಳಿಹಳ್ಳಿಮಠರು ಸಾಧಿಸಿರುವುದು ನಮಗೆಲ್ಲರಿಗೂ ಸಂತಸದ ಸಂಗತಿಯಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಶಾಂತಾ ಹಿರೇಮಠ, ಫಕಿರೇಶ ಹಿರೇಮಠ, ವಿಜಯಲಕ್ಷ್ಮೀ ಹಿರೇಮಠ, ಲಲಿತಾ, ಜಯಶ್ರೀ, ವಿಜಣ್ಣ ಬಾಳಿಹಳ್ಳಿಮಠ, ಶಿವಪ್ರಕಾಶ ಬಾಳಿಹಳ್ಳಿಮಠ ಹಾಗೂ ಕುಟುಂಬದ ಸದಸ್ಯರಿದ್ದರು.



ಸನ್ಮಾನ ಸ್ವೀಕರಿಸಿ ಚಂದ್ರು ಬಾಳಿಹಳ್ಳಿಮಠ ಮಾತನಾಡುತ್ತಾ, ತಮಗೆ ಸಂದ ಈ ಜೀವಮಾನ ಸಾಧನಾ ಪ್ರಶಸ್ತಿಗೆ ತಮ್ಮ ಪರಿವಾರದ ಸಹಾಯ–ಸಹಕಾರವೇ ಕಾರಣವಾಗಿದೆ ಎಂದರು.

# ನೋಂದಣಿ, ಮುದ್ರಾಂಕ ಶುಲ್ಕ ಪರಿಷ್ಕರಣೆ

▶▶ ಮೊದಲನೇ ಪುಟದಿಂದ

ನೋಂದಣಿಗೆ ಅಪಾಯಿಂಟ್‌ಮೆಂಟ್ ಪಡೆದಿರುವವರು ಅಥವಾ ಶುಲ್ಕವನ್ನು ಪಾವತಿಸಿ ಅಪಾಯಿಂಟ್‌ಮೆಂಟ್ ಪಡೆಯದಿರುವವರು, ವ್ಯತ್ಯಾಸದ ಮೊತ್ತವನ್ನು ಇಲಾಖೆಯ ಅಧಿಕೃತ ಪೋರ್ಟಲ್ ಮೂಲಕ ಪಾವತಿಸಬೇಕು. ಮೊದಲು ಬಳಸಿದ ಲಾಗಿನ್ ಮೂಲಕವೇ ಈ ಪಾವತಿಯನ್ನು ಮಾಡಬೇಕು. ಅರ್ಜಿದಾರರಿಗೆ ನೆರವಾಗುವ ದೃಷ್ಟಿಯಿಂದ ಅಗತ್ಯ ಸೂಚನೆಗಳನ್ನು ಒಳಗೊಂಡ ಎಸ್‌ಎಂಎಸ್ ನೇರವಾಗಿ ಅವರ ನೋಂದಾಯಿತ ಮೊಬೈಲ್ ಸಂಖ್ಯೆಗೆ ಕಳುಹಿಸಲಾಗುವುದು.

ಈಗಾಗಲೇ ದಸ್ತಾವೇಜುಗಳ ನೋಂದಣಿಗೆ ಸಲ್ಲಿಸಲಾಗಿರುವ ಹಾಗೂ ಪರಿಶೀಲನೆಯಲ್ಲಿರುವ ದಸ್ತಾವೇಜುಗಳಿಗೆ ನೋಂದಣಿ ಶುಲ್ಕವನ್ನು ಮರು ಲೆಕ್ಕ ಹಾಕಲಾಗುವುದು ಮತ್ತು ಪರಿಷ್ಕೃತ ಶೇಕಡ 2ರಂತೆ ನೋಂದಣಿ ಶುಲ್ಕವನ್ನು ಪಾವತಿಸಬೇಕಾಗುತ್ತದೆ. ಈ ವರ್ಗದ ಅರ್ಜಿದಾರರಿಗೆ ಪಾವತಿಯ ಪ್ರಕ್ರಿಯೆ ಪೂರ್ಣಗೊಳ್ಳುವ ಮೊದಲು ಪರಿಷ್ಕೃತ ನೋಂದಣಿ ಶುಲ್ಕದ ವಿವರವನ್ನು ತಿಳಿಸಲಾಗುವುದು.

ಇಲಾಖೆಯು ದಸ್ತಾವೇಜುಗಳ ನೋಂದಣಿ ಪ್ರಕ್ರಿಯೆಯಲ್ಲಿ ವಿಳಂಬವಾಗುವುದನ್ನು ತಪ್ಪಿಸಲು ಎಲ್ಲಾ ಅರ್ಜಿದಾರರಿಗೆ ಮೇಲ್ಕಾಣಿಸಿದ ನವೀಕರಿಸಿದ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ತಿಳಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಹಂತ ಹಂತವಾಗಿ ಅನುಸರಿಸಬಹುದಾದ ವಿವರವಾದ ಸೂಚನೆಗಳನ್ನು ಇಲಾಖೆಯ ಅಧಿಕೃತ ಪೋರ್ಟಲ್‌ನಲ್ಲಿ ಲಭ್ಯವಾಗುವಂತೆ ಕಲ್ಪಿಸಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

# ವಿಜ್ಞಾನ ಪ್ರದರ್ಶನ ಕ್ರಿಯಾಶೀಲತೆಗೆ ಸಹಕಾರಿ



■ ವಿಜಯಸಾಕ್ಷಿ ಸುದ್ದಿ, ಗದಗ

ಮಕ್ಕಳ ಕ್ರಿಯಾಶೀತೆಗೆ ವಿಜ್ಞಾನ ವಸ್ತು ಪ್ರದರ್ಶನ ಹಾಗೂ ವಿಜ್ಞಾನ ವಿಚಾರಗೋಷ್ಠಿ, ವಿಜ್ಞಾನ ನಾಟಕ ಸ್ಪರ್ಧೆ ಸಹಕಾರಿ ಎಂದು ಬ್ರೈಟ್ ಹಾರಿಝೊನ್ ಪ್ರೌಢಶಾಲೆಯ ಸಂಸ್ಥಾಪಕ ಬಿ.ಡಿ. ಹರ್ತಿ ಹೇಳಿದರು.

ತಾಲೂಕು ಮಟ್ಟದ ವಿಜ್ಞಾನ ನಾಟಕ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದ ಬ್ರೈಟ್ ಹಾರಿಝೊನ್ ಪ್ರೌಢಶಾಲೆಯ ಮಕ್ಕಳನ್ನು ಸನ್ಮಾನಿಸಿ ಮಾತನಾಡಿ, ಇಂದು ಆಧುನಿಕತೆ ಬೆಳೆದಂತೆ ವಿಜ್ಞಾನ–ತಂತ್ರಜ್ಞಾನದಲ್ಲಿ ಮಕ್ಕಳು ಭಾಗವಹಿಸುವಿಕೆಯಿಂದ ಮಕ್ಕಳಲ್ಲಿ ಕ್ರಿಯಾಶೀಲತೆ ಹೆಚ್ಚಾಗಿದ್ದು, ಮಕ್ಕಳ ಕಲಿಕೆಗೆ ಪೂರಕವಾಗಿ ಶಿಕ್ಷಕರು, ಪಾಲಕರು ಸಹಕಾರಿಸಿದಲ್ಲಿ ಸಮಾಜದಲ್ಲಿ ಉತ್ತಮ ವಿದ್ಯಾರ್ಥಿಯಾಗಿ ಬೆಳೆಯಲು ಸಾಧ್ಯವಾಗುತ್ತದೆ ಎಂದರು.

ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ, ಸಮನ್ವಯಾಧಿಕಾರಿ ಜಿ.ಎ. ಭಾವಿಕಟ್ಟಿ, ಎಸ್.ಎ. ಬೆಳದಡಿ, ಪ್ರಾಚಾರ್ಯ ಮಂಜುನಾಥ ದೇಸಾಯಿ, ಗಿರಿಧರ ಹೊಸಳ್ಳಿ ಇದ್ದರು.

# ಶಾಲಾ ಶಿಕ್ಷಣ ಕುರಿತು ಉಪನ್ಯಾಸ ಇಂದು


■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಭಾರತ ಜ್ಞಾನ ವಿಜ್ಞಾನ ಸಮಿತಿ ಗದಗ ವತಿಯಿಂದ ಆಗಸ್ಟ್ 30ರಂದು ಸಂಜೆ 6.30 ಗಂಟೆಗೆ ಗದುಗಿನ ತೋಂಟದ ಸಿದ್ಧಲಿಂಗಶ್ರೀಗಳ ಕನ್ನಡ ಭವನ, ಕ.ಸಾ.ಪ ಕಾರ್ಯಾಲಯದಲ್ಲಿ ಶಿಕ್ಷಕ ದಿನಾಚರಣೆ ಅಂಗವಾಗಿ ಶೈಕಣಿಕ ಚಿಂತನಾ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

'ಶಾಲಾ ಶಿಕ್ಷಣ–ಪ್ರಸ್ತುತ ಸಂದರ್ಭದ ಸವಾಲುಗಳು' ವಿಷಯವಾಗಿ ಭಾರತ ಜ್ಞಾನ ವಿಜ್ಞಾನ ಸಮಿತಿಯ ರಾಜ್ಯ ಉಪಾಧ್ಯಕ್ಷರು ಹಾಗೂ ಅಧ್ಯಾಪಕರಾದ ಎಫ್.ಸಿ. ಚೇಗರಡ್ಡಿ ಉಪನ್ಯಾಸ ನೀಡುವರು. ಮುಖ್ಯ ಅತಿಥಿಗಳಾಗಿ ನಿವೃತ್ತ ಉಪನಿರ್ದೇಶಕ ಎ.ಎನ್. ನಾಗರಳ್ಳಿ ಹಾಗೂ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ ಆಗಮಿಸುವರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಕ.ಸಾ.ಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ವಹಿಸುವರು.

ಸಾಹಿತ್ಯಾಭಿಮಾನಿಗಳು, ಶಿಕ್ಷಣಾಸಕ್ತರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಬೇಕೆಂದು ಕಾರ್ಯದರ್ಶಿ ಕಿಶೋರಬಾಬು ನಾಗರಕಟ್ಟಿ, ದತ್ತಪ್ರಸನ್ನ ಪಾಟೀಲ, ಡಿ.ಎಸ್. ಬಾಪುರಿ, ಸತೀಶ ಚನ್ನಪ್ಪಗೌಡ್ರ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

# ಮನೋರಮಾ ಕಾಲೇಜಿನಲ್ಲಿ ಕ್ರೀಡಾ ದಿನಾಚರಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಮನೋರಮಾ ಕಾಲೇಜಿನಲ್ಲಿ ಹಾಕಿ ಮಾಂತ್ರಿಕ ಮೇಜರ್ ಧ್ಯಾನಚಂದ್ ಅವರ ಜನ್ಮದಿನದ ಪ್ರಯುಕ್ತ ರಾಷ್ಟ್ರೀಯ ಕ್ರೀಡಾ ದಿನಾಚರಣೆ ಆಚರಿಸಲಾಯಿತು.

ಪ್ರಾಚಾರ್ಯ ಬಿ.ಎಸ್. ಹಿರೇಮಠ ಮೇಜರ್ ಧ್ಯಾನಚಂದ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಹಾಕಿ ಆಟದಲ್ಲಿ ವಿಶೇಷ ಸಾಧನೆಗೈದ ಹಾಕಿ ಪಟು ಮೇಜರ್ ಧ್ಯಾನಚಂದ್ ಅವರ ಕ್ರೀಡಾ ಅಭಿಲಾಷೆಯನ್ನು ತಿಳಿಸಿ, ರಾಷ್ಟ್ರೀಯ ಕ್ರೀಡಾ ದಿನಾಚರಣೆ ಶುಭಾಶಯಗಳನ್ನು ತಿಳಿಸಿದರು.

ದೈಹಿಕ ನಿರ್ದೇಶಕ ಖಯುಮ ನವಲೂರ ವಿದ್ಯಾರ್ಥಿಗಳಿಗೆ ಒಳಾಂಗಣ ಹಾಗೂ ಹೊರಾಂಗಣ ಕ್ರೀಡಾ ಚಟುವಟಿಕೆಗಳ ಮಾಹಿತಿ ತಿಳಿಸಿ, ಕ್ರೀಡಾಪಟುಗಳನ್ನು ಸ್ಮರಿಸಿದರು. ಸಂಸ್ಥೆಯ ಚೆರಮನ್ ಎನ್. ಎಮ್. ಕುಡತರಕರ ಸಭೆಯ ಅಧ್ಯಕ್ಷತೆ ವಹಿಸಿದ್ದರು.

ಈ ಸಂದರ್ಭದಲ್ಲಿ ಸಂಸ್ಥೆಯ ಕಾರ್ಯದರ್ಶಿ ಮಂಜುನಾಥ ಕುಡತರಕರ, ಪ್ರಾಚಾರ್ಯ ಬಿ.ಎಸ್. ಹೀರೆಮಠ, ಆಡಳಿತಾಧಿಕಾರಿ ಕಿಶೋರ ಮುದಗಲ್ಲ, ಸಂಸ್ಥೆಯ ಖಜಾಂಚಿ ಸಂಜಯ ಕುಡತರಕರ, ನಿರ್ದೇಶಕ ಚೇತನ ಕುಡತರಕರ, ಸಂಯೋಜಕರುಗಳಾದ ಪ್ರೊ. ಸವಿತಾ ಪೂಜಾರ, ಪ್ರೊ. ಶಾಹೀದಾ ಶಿರಹಟ್ಟಿ ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

### ಸಹಕಾರ ಇಲಾಖೆಯಿಂದ ಪ್ರೌಢಶಾಲೆ, ಕಾಲೇಜು ವಿದ್ಯಾರ್ಥಿಗಳಿಗಾಗಿ ಸ್ಪರ್ಧೆ

# ಪ್ರಬಂಧ, ಚರ್ಚಾ ಸ್ಪರ್ಧೆಯಲ್ಲಿ ಪಾಲ್ಗೊಳ್ಳಿ

■ ವಿಜಯಸಾಕ್ಷಿ ಸುದ್ದಿ, ಗದಗ

ಸಹಕಾರ ಇಲಾಖೆ ಗದಗ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಬೆಂಗಳೂರು, ಗದಗ ಜಿಲ್ಲಾ ಸಹಕಾರ ಯೂನಿಯನ್ ಗದಗ, ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ಶ್ರೀ ಬಸವೇಶ್ವರ ಮಹಾವಿದ್ಯಾಲಯ ಗದಗ ಇವರ ಸಹಯೋಗದೊಂದಿಗೆ ಸೆಪ್ಟೆಂಬರ್ 2ರಂದು ಜಿಲ್ಲಾ ಮಟ್ಟದ ಪ್ರಬಂಧ ಸ್ಪರ್ಧೆಯನ್ನು ಹಾಗೂ ಜೆ.ಟಿ. ಕಾಲೇಜು ಗದಗ ಇವರ ಸಹಯೋಗದೊಂದಿಗೆ ಸೆ.3ರಂದು ಚರ್ಚಾ ಸ್ಪರ್ಧೆಯನ್ನು ಜೆ.ಟಿ. ಅಡಿಟೋರಿಯಂ ಹಾಲ್‌ನಲ್ಲಿ ಜಿಲ್ಲಾ ಸಹಕಾರ ಯೂನಿಯನ್‌ನ ಅಧ್ಯಕ್ಷ ಸಿ.ಎಂ. ಪಾಟೀಲರ ಅಧ್ಯಕ್ಷತೆಯಲ್ಲಿ ಜರುಗಿಸಲಾಗುವುದು.

ಸೆ.2ರ ಮದ್ಯಾಹ್ನ 12 ಗಂಟೆಗೆ 'ವಿದ್ಯಾರ್ಥಿಗಳಿಗೆ ಸಹಕಾರ ಸಂಘಗಳ ಕಾರ್ಯನಿರ್ವಹಣೆಯ ಪ್ರಾತ್ಯಕ್ಷತೆಯನ್ನು ನೀಡುವುದರಿಂದ ಸಹಕಾರಿ ವ್ಯವಸ್ಥೆಯ ಬೆಳವಣಿಗೆ ನೆರವಾಗಬಲ್ಲದು' ಎಂಬ ವಿಷಯದ ಕುರಿತು ಆಯ್ದ ಪ್ರೌಢಶಾಲೆ ವಿದ್ಯಾರ್ಥಿಗಳಿಗೆ ಗದುಗಿನ ಶ್ರೀ ಬಸವೇಶ್ವರ ಮಹಾವಿದ್ಯಾಲಯದ ಸಭಾಭವನದಲ್ಲಿ ಪ್ರಬಂಧ ಸ್ಪರ್ಧೆಯನ್ನು ಜರುಗಿಸಲಾಗುವುದು. ವಿಜೇತರಿಗೆ ಸೂಕ್ತ ನಗದು ಬಹುಮಾನ ಪ್ರಶಸ್ತಿ ಪತ್ರ ಹಾಗೂ ನೆನಪಿನ ಕಾಣಿಕೆ ನೀಡಲಾಗುವುದು. ಅನುಕ್ರಮವಾಗಿ ಹೆಚ್ಚು ಅಂಕ ಪಡೆದ ಮೂರು ಉತ್ತರ ಪತ್ರಿಕೆಗಳನ್ನು ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಇವರಿಗೆ ರಾಜ್ಯ ಮಟ್ಟದ ಆಯ್ಕೆಗಾಗಿ ಕಳುಹಿಸಲಾಗುವುದು.

ಜಿಲ್ಲಾ ಮಟ್ಟದ ಚರ್ಚಾ ಸ್ಪರ್ಧೆಯನ್ನು ಸೆ.3ರಂದು ಬೆಳಿಗ್ಗೆ 11 ಗಂಟೆಗೆ ಜೆ.ಟಿ. ಕಾಲೇಜ್ ಅಡಿಟೋರಿಯಂ ಹಾಲ್‌ನಲ್ಲಿ 'ಶಾಲಾ–ಕಾಲೇಜು ಪಠ್ಯದಲ್ಲಿ ಸಹಕಾರ ವಿಷಯ ಸೇರ್ಪಡೆ ಹಾಗೂ ಸಹಕಾರಿ ವಿಶ್ವವಿದ್ಯಾಲಯಗಳ ಸ್ಥಾಪನೆಯಿಂದ ಮಾತ್ರವೇ ಸಹಕಾರಿ ವ್ಯವಸ್ಥೆ ಸದೃಢಗೊಳ್ಳಬಲ್ಲದು' ಎಂಬ ವಿಷಯದ ಕುರಿತು ಚರ್ಚಾ ಸ್ಪರ್ಧೆ ಏರ್ಪಡಿಸಲಾಗಿದೆ. ಈ ಚರ್ಚಾ ಸ್ಪರ್ಧೆಯಲ್ಲಿ ಭಾಗವಹಿಸುವ ಅಭ್ಯರ್ಥಿಗಳಲ್ಲಿ ಎರಡು ಗುಂಪುಗಳನ್ನು ಮಾಡಲಾಗುವುದು, ವಿಷಯದ ಪರವಾಗಿ ಹಾಗೂ ವಿಷಯದ ವಿರೋಧವಾಗಿ ಮಾತನಾಡಬೇಕು.

ಚರ್ಚಾ ಸ್ಪರ್ಧೆಯಲ್ಲಿ ಅತ್ಯಧಿಕ ಅಂಕಗಳನ್ನು ಪಡೆದು ವಿಜೇತರಾದ ವಿದ್ಯಾರ್ಥಿಗಳನ್ನು ರಾಜ್ಯದ ಆಯ್ದ ವಿಶ್ವವಿದ್ಯಾಲಯದಲ್ಲಿ ನಡೆಯಲಿರುವ ರಾಜ್ಯ ಮಟ್ಟದ ಚರ್ಚಾ ಸ್ಪರ್ಧೆಯಲ್ಲಿ ಭಾಗವಹಿಸಲು ಕಳುಹಿಸಿಕೊಡಲಾಗುವುದು. ರಾಜ್ಯ ಮಟ್ಟದ ಚರ್ಚಾ ಸ್ಪರ್ಧೆ ನಡೆಯುವ ದಿನಾಂಕ, ವೇಳೆ ಇತ್ಯಾದಿಗಳನ್ನು ನಂತರ ತಿಳಿಸಲಾಗುವುದು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಸಹಕಾರ ಸಂಘಗಳ ಉಪನಿಬಂಧಕರಾದ ಎಸ್.ಎಸ್. ಕಬಾಡೆ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಗದಗ ಉಪನಿರ್ದೇಶಕ ಸಿದ್ದಲಿಂಗ ಬಂಡು ಮಸನಾಯಕ, ಶಾಲಾ ಶಿಕ್ಷಣ ಇಲಾಖೆಯ ಗದಗ ಉಪನಿರ್ದೇಶಕ ಆರ್.ಎಸ್. ಬುರಡಿ, ಬಸವೇಶ್ವರ ಮಹಾವಿದ್ಯಾಲಯದ ಪ್ರಾಂಶುಪಾಲ ಎಂ.ಎಂ. ಬುರಡಿ, ಪ್ರಶಾಂತ ಮುಧೋಳ, ಸಹಕಾರ ಅಭಿವೃದ್ಧಿ ಅಧಿಕಾರಿಗಳು, ಮುಖ್ಯ ಅತಿಥಿಗಳು ಹಾಗೂ ತೀರ್ಪುಗಾರರಾಗಿ ವಿಶ್ರಾಂತ ಸಹಕಾರ ಸಂಘಗಳ ಸಹಾಯಕ ನಿಬಂಧಕ ಎಂ.ಸಿ. ಉಪ್ಪಿನ, ಕ.ಹಾ.ಮ ತರಬೇತಿ ಕೇಂದ್ರದ ನಿವೃತ್ತ ಜಂಟಿ ನಿರ್ದೇಶಕ ಎಂ.ಬಿ. ಮಡಿವಾಳರ ಮತ್ತು ಕೆ.ಆಯ್.ಸಿ.ಎಂ ಧಾರವಾಡದ ಪ್ರಾಂಶುಪಾಲ ಡಿ.ಆರ್. ವೆಂಕಟರಾಮ ಆಗಮಿಸುವರು ಎಂದು ಪ್ರಕಟಣೆ ತಿಳಿಸಿದೆ.

### ಕೋಮು ಸೌಹಾರ್ದತೆಯ ಸಂದೇಶಕ್ಕೆ ಸಾಕ್ಷಿಯಾದ ಗದುಗಿನ ಪುಟ್ಟ ಗ್ರಾಮ ಕಳಸಾಪೂರ

# ಒಗ್ಗಟ್ಟು ಮೂಡಿಸುವ ಭಾವೈಕ್ಯತೆಯ ಗಣಪ

■ ವಿಜಯಸಾಕ್ಷಿ ಸುದ್ದಿ, ಗದಗ

ಎಲ್ಲೆಡೆ ಗಣೇಶೋತ್ಸವದ ಸಂಭ್ರಮ ಮನೆಮಾಡಿದೆ. ಈ ನಡುವೆ ಗದಗ ತಾಲೂಕಿನ ಕಳಸಾಪೂರ ಗ್ರಾಮದಲ್ಲಿ ಹೃದಯಸ್ಪರ್ಶಿ ಘಟನೆ ಎಲ್ಲರ ಗಮನ ಸೆಳೆಯುತ್ತಿದೆ. ದೇಶದಲ್ಲಿ ಕೋಮು ದಳ್ಳುರಿ ಹೊತ್ತಿ ಉರಿಯುತ್ತಿದೆ. ಜಾತಿ ಜಾತಿಗಳ ನಡುವೆ ಹೊಡೆದಾಟ, ಗದ್ದಲ, ಗಲಾಟೆಗಳು ನಿರಂತರವಾಗಿ ನಡೆಯುತ್ತಲೇ ಇದೆ. ಆದರೆ, ಗದಗ ತಾಲೂಕಿನ ಕಳಸಾಪೂರ ಗ್ರಾಮದಲ್ಲಿ ಮಾತ್ರ ಜಾತಿ, ಪಂಥ, ಬೇಧ ಇಲ್ಲದೇ ಎಲ್ಲರೂ ಒಗ್ಗಟ್ಟಿನಿಂದ, ಸಡಗರ, ಸಂಭ್ರಮದಿಂದ ಗಣೇಶೋತ್ಸವ ಆಚರಿಸುತ್ತಾರೆ.

ಕಳಸಾಪೂರ ಗ್ರಾಮದಲ್ಲಿ ವಿಘ್ನೇಶ್ವರನಿಗೆ ಒಂದು ಕಡೆ ಹಿಂದೂ ಮಹಿಳೆ ಮತ್ತೊಂದು ಕಡೆ ಮುಸ್ಲಿಂ ಮಹಿಳೆ ಆರತಿ ಮಾಡುವ ದೃಶ್ಯ ದೇಶಕ್ಕೆ ಭಾವೈಕ್ಯತೆ ಸಂದೇಶ ಸಾರುವಂತಿದೆ. ಇದಕ್ಕೆಲ್ಲಾ ಕಾರಣವಾಗಿರುವುದು ಅಂಜುಮನ್-ಎ-ಇಸ್ಲಾಂ ಕಮಿಟಿ ಹಾಗೂ ಈಶ್ವರ ಬಸವಣ್ಣ ದೇವಾಲಯದ ಕಮಿಟಿ. ಈ ಎರಡು ಕಮಿಟಿಗಳ ಸಹಯೋಗದಲ್ಲಿ ಪ್ರತಿವರ್ಷ ಗಣೇಶಮೂರ್ತಿ ಪ್ರತಿಷ್ಠಾಪನೆ ಮಾಡಲಾಗುತ್ತಿದೆ. ದೇವನೊಬ್ಬ ನಾಮ ಹಲವು ಎಂಬ ನಂಬಿಕೆಯಲ್ಲಿ ಇಲ್ಲಿನ ಮುಸ್ಲಿಂ ಬಾಂಧವರು, ಹಿಂದೂಗಳ ಜೊತೆ ಸೇರಿ ವಿಘ್ನ ನಿವಾರಕನನ್ನ ಪ್ರತಿಷ್ಠಾಪನೆ ಮಾಡಿದ್ದಾರೆ. ಅಷ್ಟೇ ಅಲ್ಲದೆ ನಿತ್ಯವೂ ಹಿಂದೂ-ಮುಸ್ಲಿಂ ಬಾಂಧವರು ಸೇರಿ ಸಾಮೂಹಿಕವಾಗಿ ಪೂಜೆ ಸಲ್ಲಿಸುತ್ತಾರೆ.



ಸತತ 15 ವರ್ಷಗಳಿಂದ ಅಂಜುಮನ್-ಎ-ಇಸ್ಲಾಂ ಹಾಗೂ ಈಶ್ವರ ದೇವಾಲಯ ಕಮಿಟಿಯವರು ಜಂಟಿಯಾಗಿ ಏಕದಂತನನ್ನು ಪೂಜಿಸುತ್ತ ಬಂದಿದ್ದು, ಒಟ್ಟಿಗೆ ಹಬ್ಬ ಆಚರಿಸುವ ಮೂಲಕ ಭಾವೈಕ್ಯತೆಗೆ ಸಾಕ್ಷಿಯಾಗಿದ್ದಾರೆ.

ಶಾಂತಿ-ಸೌಹಾರ್ದತೆಗೆ ಹೆಸರಾದ ಕಳಸಾಪೂರ ಗ್ರಾಮ, ಈಗ ಭಾವೈಕ್ಯತೆಯ ಕೇಂದ್ರ ಬಿಂದುವಾಗಿದೆ. ವರ್ಷದಿಂದ ವರ್ಷಕ್ಕೆ ಕಳಸಾಪುರದ ಭಾವೈಕ್ಯತಾ ಗಣೇಶ ಗ್ರಾಮಸ್ಥರಲ್ಲಿ ಒಗ್ಗಟ್ಟನ್ನು ಹೆಚ್ಚಿಸುತ್ತಿದ್ದಾನೆ. ಇಡೀ ರಾಜ್ಯಾದ್ಯಂತ ಕಳಸಾಪುರ ಭಾವೈಕ್ಯತೆಗೆ ಕಳಸಪ್ರಾಯವಾಗಿದೆ ಎಂಬ ಭಾವನೆಯನ್ನು ಸ್ಥಳೀಯರಲ್ಲಿ ಮೂಡಿಸುತ್ತಿದೆ. ಹಿಂದೂ-ಮುಸ್ಲಿಮರು ಒಟ್ಟಾಗಿಯೇ ರಂಜಾನ್, ಈದ್ ಮಿಲಾದ್, ಮೊಹರಂ, ದಸರಾ ಹೀಗೆ ಎಲ್ಲಾ ಹಬ್ಬಗಳನ್ನು ಆಚರಿಸುವ ಮೂಲಕ ಸಬ್ ಕಾ ಮಾಲೀಕ್ ಏಕ್ ಹೈ ಎಂಬ ಮಾತನ್ನು ಕಳಸಾಪುರ ಗ್ರಾಮಸ್ಥರು ಸಾಬೀತು ಮಾಡುತ್ತಿದ್ದಾರೆ. ಗ್ರಾಮದಲ್ಲಿ ನಡೆಯುವ ಎಲ್ಲ ಹಬ್ಬಗಳನ್ನು ಇಲ್ಲಿನ ಜನರು ಜಾತಿ, ಮತ, ಪಂಥವಿಲ್ಲದೇ ಆಚರಣೆ ಮಾಡುತ್ತ ಬರುತ್ತಿರುವುದು ಅತ್ಯಂತ ಖುಷಿಯ ಸಂಗತಿ ಎಂದು ಸ್ಥಳೀಯರು ಅಭಿಪ್ರಾಯ ವ್ಯಕ್ತಪಡಿಸುತ್ತಾರೆ.



ಅಂಜುಮನ್ ಕಮಿಟಿ ಹಾಗೂ ಈಶ್ವರ ದೇವಸ್ಥಾನದ ಕಮಿಟಿಯ ಸದಸ್ಯರು, ಎಲ್ಲಾ ಖರ್ಚು ವೆಚ್ಚಗಳಿಗೆ ಮೊದಲೇ ಗ್ರಾಮಸ್ಥರಿಂದ ದೇಣಿಗೆ ಸಂಗ್ರಹ ಮಾಡುತ್ತಾರೆ. ಎಲ್ಲರೂ ಕೆಲಸಗಳನ್ನು ಹಂಚಿಕೊಂಡು ಹಬ್ಬವನ್ನು ಸಡಗರದಿಂದ ಆಚರಿಸುತ್ತಾರೆ. ಒಟ್ಟಾರೆ, ಇಂತಹ ಸಾಮರಸ್ಯದ ಬದುಕು ಹಾಗೂ ಆಚರಣೆ ಎಲ್ಲರಿಗೂ ಮಾದರಿಯಾಗಿದೆ.

### ಮಕ್ಕಳ ಗಣಿತ ಕಲಿಕಾಸಕ್ತಿ ಪರೀಕ್ಷಿಸಿದ ತಾಪಂ ಇಒ ಚಂದ್ರಶೇಖರ ಕಂದಕೂರ

## ಶಾಲಾ ಶೈಕ್ಷಣಿಕ ಚಟುವಟಿಕೆಗಳ ಪರಿಶೀಲನೆ



ಶಾಲೆಯ ಮುಖ್ಯೋಪಾಧ್ಯಾಯರು ಮತ್ತು ಶಿಕ್ಷಕರ ಜೊತೆ ಸಮಾಲೋಚನೆ ನಡೆಸಿದ ಇಒ ಅವರು, ಶಾಲಾ ಯೋಜನೆಯಂತೆ ಕೇವಲ ಪಾಠ ಮುಕ್ತಾಯಗೊಳಿಸುವ ಕಾರ್ಯವನ್ನು ಅಷ್ಟೇ ಮಾಡದೇ ಶಾಲಾ ಶಿಕ್ಷಕರು ಮಕ್ಕಳ ಕಲಿಕಾ ಗುಣಮಟ್ಟಕ್ಕೆ ಅನುಗುಣವಾಗಿ ಪಾಠ ಬೋಧನೆ ಮಾಡಬೇಕು. ವಿಶೇಷ ತರಗತಿ ಆಯೋಜಿಸಿ ಕಲಿಕೆಯಲ್ಲಿ ಹಿಂದುಳಿದ ಮಕ್ಕಳ ಬುದ್ಧಿಮಟ್ಟ ಹೆಚ್ಚಿಸುವ ಕೆಲಸವನ್ನು ಶಾಲಾ ವಿಷಯ ಶಿಕ್ಷಕರು ಮಾಡಬೇಕೆಂದು ಸೂಚಿಸಿದರು.

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ.ಕಂದಕೂರ ರಾಜೂರು ಗ್ರಾಮದ ಸರ್ಕಾರಿ ಕನ್ನಡ ಪ್ರಾಥಮಿಕ ಶಾಲೆಗೆ ದಿಢೀರ್ ಭೇಟಿ ನೀಡಿ ಶಾಲಾ ಶೈಕ್ಷಣಿಕ ಚಟುವಟಿಕೆಗಳನ್ನು ಪರಿಶೀಲಿಸಿದರು. ಶಾಲೆಯಲ್ಲಿ ಮಕ್ಕಳ ಕಲಿಕಾ ಗುಣಮಟ್ಟವನ್ನು ಹೆಚ್ಚಿಸುವಂತೆ ಶಿಕ್ಷಕರಿಗೆ ತಾಕೀತು ಮಾಡಿದರು.

ರಾಜೂರು ಗ್ರಾಮದ ಸರ್ಕಾರಿ ಕನ್ನಡ ಪ್ರಾಥಮಿಕ ಶಾಲೆಗೆ ಭೇಟಿ ನೀಡಿದ ಇಒ ಅವರು, 7ನೇ ತರಗತಿಯ ಮಕ್ಕಳಿಗೆ ಗಣಿತ ವಿಷಯದ ಸಂಕಲನ, ವ್ಯವಕಲನ, ಸರಳೀಕರಣ ಮತ್ತು ಏಕೀಕರಣ ಕುರಿತು ಪಾಠ ಬೋಧನೆ ಮಾಡಿದರು. ಗಣಿತ ವಿಷಯದಲ್ಲಿ ಶಾಲಾ ಮಕ್ಕಳು ಹೊಂದಿರುವ ಗುಣಮಟ್ಟ ಪರಿಶೀಲಿಸಿದರು. ಖುದ್ದು ಮಕ್ಕಳನ್ನು ಕರೆದು ಬೋರ್ಡ್‌ನಲ್ಲಿ ಸಂಖ್ಯೆಗಳ ಸಂಕಲನ ಮಾಡುವಂತೆ ತಿಳಿಸಿ ಮಕ್ಕಳಿಗೆ ಇರುವ ಗಣಿತ ವಿಷಯದ ಆಸಕ್ತಿ ಪರಿಶೀಲಿಸಿದರು. ಅಲ್ಲದೆ ಖುದ್ದು ಕೆಲವೊಂದು ಗಣಿತದ ಸಮಸ್ಯೆಗಳನ್ನು ಬಗೆಹರಿಸಿದ ಇಒ ಕಂದಕೂರು ಅವರು ಮಕ್ಕಳಿಗೆ ಗಣಿತದ ಮೇಷ್ಟ್ರಾಗಿ ಗಮನ ಸೆಳೆದರು. ಶಾಲೆಯ ಅಡುಗೆ ಕೋಣೆಗೆ ಭೇಟಿ ನೀಡಿ ಮಕ್ಕಳಿಗೆ ಕೊಡುವ ಆಹಾರದ ಗುಣಮಟ್ಟ ಪರಿಶೀಲಿಸಿದರು. ಆಹಾರದ ಮೆನೂವಿನಂತೆ ಪ್ರತಿದಿನ ಸರಿಯಾದ ಸಮಯಕ್ಕೆ ಮಕ್ಕಳಿಗೆ ಆಹಾರ ಸಿದ್ಧಪಡಿಸಬೇಕೆಂದು ಅಡುಗೆ ಸಿಬ್ಬಂದಿ ಅವರಿಗೆ ತಾಕೀತು ಮಾಡಿದರು. ಇದೇ ವೇಳೆ ಶಾಲೆಯ ಮೂಲಭೂತ ಅವಶ್ಯಕತೆಗಳ ಪೂರೈಕೆ ಬಗ್ಗೆ ಶಾಲಾ ಮುಖ್ಯೋಪಾಧ್ಯಾಯರು ಇಒ ಅವರಿಗೆ ಮನವಿ ಮಾಡಿಕೊಂಡರು. ಆದ್ಯತೆ ಮೇರೆಗೆ ಪೂರೈಸುವುದಾಗಿ ಇಒ ಅವರು ಭರವಸೆ ನೀಡಿದರು. ಗ್ರಾಮದ ಗ್ರಂಥಾಲಯಕ್ಕೆ ಭೇಟಿ ನೀಡಿ ಪುಸ್ತಕ ಓದಿಗೆ ಸೂಕ್ತ ವಾತಾವರಣ ನಿರ್ಮಿಸಿರುವ ಕುರಿತು ಪರೀಕ್ಷಿಸಿದರು. ಗ್ರಂಥಾಲಯಕ್ಕೆ ಗ್ರಾಮದ ಸಾರ್ವಜನಿಕರು ಮತ್ತು ಯುವಕರು ಆಸಕ್ತಿಯಿಂದ ಬಂದು ಓದುವ ಹವ್ಯಾಸ ಬೆಳೆಸಿಕೊಳ್ಳುವಂತೆ ವಾತಾವರಣ ನಿರ್ಮಿಸಿ ಎಂದು ಗ್ರಂಥಪಾಲಕರಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ರಾಜೂರು ಗ್ರಾ.ಪಂ ಕಾರ್ಯದರ್ಶಿ ರಾಜು ಗಾರಗಿ, ನರೇಗಾ ಸಿಬ್ಬಂದಿಗಳು ಮತ್ತು ಗ್ರಾ.ಪಂ ಸಿಬ್ಬಂದಿಗಳು ಹಾಜರಿದ್ದರು.

## ಜೂನಿಯರ್ ಪರೀಕ್ಷೆಯಲ್ಲಿ ದ್ವಿತಿಯ ಸ್ಥಾನ



■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ ಮೈಸೂರು ಇವರು ನಡೆಸುವ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ ಹಾರ್ಮೋನಿಯಂ ವಾದ್ಯದ ಜೂನಿಯರ್ ಪರೀಕ್ಷೆಯಲ್ಲಿ ನಗರದ ಕುಮಾರೇಶ್ವರ ಕೃಪಾಪೋಷಿತ ಪಂ. ಪಂಚಾಕ್ಷರಿ ಗವಾಯಿಗಳ ಸಂಗೀತ ಪಾಠಶಾಲೆಯ ವಿದ್ಯಾರ್ಥಿನಿ ದಿಯಾ ಪೀರಸಾಬ್ ಕೌತಾಳರು ಸಂಗೀತ ವಿಶ್ವವಿದ್ಯಾಲಯಕ್ಕೆ ದ್ವಿತೀಯ ಮತ್ತು ಗದಗ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದಿದ್ದಾರೆ.

ಕೆಎಸ್‌ಆರ್‌ಟಿಸಿ ನಿಗಮದ ಉಪಾಧ್ಯಕ್ಷರಾದ ಪೀರಸಾಬ್ ಕೌತಾಳರ ಪುತ್ರಿಯಾಗಿರುವ ದಿಯಾ ಕೌತಾಳರಿಗೆ ಮೈಸೂರ ವಿಶ್ವವಿದ್ಯಾಲಯ ಸಭಾಂಗಣದಲ್ಲಿ ನಡೆದ ಸಮಾರಂಭದಲ್ಲಿ ಕುಲಪತಿಗಳಾದ ಪ್ರೊ. ನಾಗೇಶ ಬೆಟ್ಟಕೊಡೆ, ಅಂತಾರಾಷ್ಟ್ರೀಯ ವಾಯೋಲಿನ್ ವಾದಕರು ಮತ್ತು ಸಂಗೀತ ವಿದ್ವಾಂಸರಾದ ಡಾ. ಮೈಸೂರು ಮಂಜುನಾಥ ಅವರು ಪ್ರಮಾಣಪತ್ರ ನೀಡಿದರು.

## ಗಣೇಶೋತ್ಸವದ ನಿಮಿತ್ತ ವಿವಿಧ ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಜೈ ಹನುಮಾನ್ ಯುವಕ ಸಂಘ, ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಸಮಿತಿ ಹಾಗೂ ವಿವೇಕಾನಂದ ನಗರದ ಕಾಶಿ ವಿಶ್ವನಾಥ ದೇವಸ್ಥಾನದ ಸಹಯೋಗದಲ್ಲಿ 27ನೇ ವರ್ಷದ ಗಣೇಶೋತ್ಸವ ಪ್ರಯುಕ್ತ ಆಗಸ್ಟ್ 31ರ ಬೆಳಿಗ್ಗೆ 10.30 ಗಂಟೆಗೆ ಮಹಿಳೆಯರಿಗಾಗಿ ವಿವಿಧ ಸ್ಪರ್ಧಾ ಕಾರ್ಯಕ್ರಮಗಳು ನಡೆಯಲಿವೆ.

ಸೆ. 1ರಂದು ಸಂಜೆ 5 ಗಂಟೆಗೆ ಕಾರ್ತಿಕೋತ್ಸವ ಹಾಗೂ ಸಸಿ ವಿತರಣಾ ಕಾರ್ಯಕ್ರಮ ನಡೆಯಲಿದೆ. ಸೆ. 2ರಂದು ಬೆಳಿಗ್ಗೆ 8 ಗಂಟೆಗೆ ಸತ್ಯನಾರಾಯಣ ಪೂಜೆ, ಡಾ.ಪಂ. ಪುಟ್ಟರಾಜ ಗವಾಯಿಗಳವರ ಪುಣ್ಯ ಸ್ಮರಣೋತ್ಸವ ಹಾಗೂ ಮಧ್ಯಾಹ್ನ 12.30ಕ್ಕೆ ಪ್ರಸಾದ ಸೇವೆ ನಡೆಯಲಿದೆ.



ಸೆ. 3ರಂದು ಸಂಜೆ 5 ಗಂಟೆಗೆ ಸನ್ಮಾನ, ಬಹುಮಾನ ವಿತರಣೆ ಕಾರ್ಯಕ್ರಮ ಜರುಗಲಿದೆ. ಸೆ. 4ರ ಸಂಜೆ 4 ಗಂಟೆಗೆ ಗಣೇಶನ ಮಹಾಪೂಜೆಯೊಂದಿಗೆ ಗಣೇಶನ ಮೂರ್ತಿಯನ್ನು ಭವ್ಯ ಮೆರವಣಿಯೊಂದಿಗೆ ವಿಸರ್ಜನೆ ಮಾಡಲಾಗುವುದು ಎಂದು ಸಂಘಟಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗಣೇಶ ಹಬ್ಬದ ಹಿನ್ನೆಲೆ; ಮದ್ಯ ಮಾರಾಟ, ಮದ್ಯ ಸಾಗಾಟ ನಿಷೇಧ

■ ವಿಜಯಸಾಕ್ಷಿ ಸುದ್ದಿ, ಗದಗ

ದಿ: 27-8-2025 ರಿಂದ ಗದಗ ಜಿಲ್ಲೆಯಾದ್ಯಂತ ಗಣೇಶ ಹಬ್ಬ ಆಚರಿಸಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಜಿಲ್ಲೆಯಾದ್ಯಂತ ವಿವಿಧ ಸಾರ್ವಜನಿಕ ಸ್ಥಳಗಳಲ್ಲಿ ಗಣೇಶ ವಿಗ್ರಹಗಳನ್ನು ಪ್ರತಿಷ್ಠಾಪನೆ ಮಾಡಲಾಗಿದೆ. ಗಣೇಶ ಮೂರ್ತಿಗಳನ್ನು ಆಯಾ ಸಂಘಟಿಕರು ಹಾಗೂ ಸಾರ್ವಜನಿಕರು ( 1,3,5,7,9,11,13,15,17,19,21,23 ) ರ ದಿನಗಳಂದು ಮೆರವಣಿಗೆ ಮೂಲಕ ಸ್ಥಳೀಯ ಆಡಳಿತ ನಿಗದಿಪಡಿಸಿದ ಸ್ಥಳದಲ್ಲಿ ವಿಸರ್ಜನೆ ಕಾರ್ಯಕ್ರಮಗಳು ಜರುಗುತ್ತವೆ. ಆ ಕಾಲಕ್ಕೆ ಸದರಿ ದಿನಾಂಕಗಳಂದು ಜಿಲ್ಲೆಯಲ್ಲಿ ಶಾಂತಿ ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ವಿಸರ್ಜನೆ ದಿನಾಂಕದಂದು ಗದಗ ಜಿಲ್ಲೆಯಾದ್ಯಂತ ಗಣೇಶ ಮೂರ್ತಿಗಳ 5,7,9,11,13,15,17,19,21,23 ನೇ ದಿನಗಳ ವಿಸರ್ಜನೆ ಸಮಯದಲ್ಲಿ ಕೆಳಕಂಡಂತೆ ಸಂಬಂಧಪಟ್ಟ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಮದ್ಯ ಸಾಗಾಟ ಮತ್ತು ಮದ್ಯ ಮಾರಾಟ ನಿಷೇಧಿಸಲಾಗಿದೆ.

5ನೇ ದಿನ ಆಗಸ್ಟ್ 31ರಂದು ಬೆ 6 ಗಂಟೆಯಿಂದ ಸೆಪ್ಟೆಂಬರ್ 1 ರ ಬೆ 6 ಗಂಟೆಯವರೆಗೆ ಗದಗ, ಶಿರಹಟ್ಟಿ, ಲಕ್ಷ್ಮೇಶ್ವರ, ನರಗುಂದ, ಮುಂಡರಗಿ, ರೋಣ ಹಾಗೂ ಗಜೇಂದ್ರಗಡ ತಾಲೂಕುಗಳಲ್ಲಿ, 7ನೇ ದಿನ ಸೆಪ್ಟೆಂಬರ್ 2 ರಂದು ಬೆ 6 ಗಂಟೆಯಿಂದ ಸೆಪ್ಟೆಂಬರ್ 3 ರ ಬೆ 6 ಗಂಟೆಯವರೆಗೆ ಗದಗ , ಶಿರಹಟ್ಟಿ, ಲಕ್ಷ್ಮೇಶ್ವರ, ನರಗುಂದ, ಮುಂಡರಗಿ, ರೋಣ, ಗಜೇಂದ್ರಗಡ ತಾಲೂಕುಗಳಲ್ಲಿ, 9ನೇ ದಿನ ಸೆಪ್ಟೆಂಬರ್ 4 ರಂದು ಬೆ 6 ಗಂಟೆಯಿಂದ ಸೆಪ್ಟೆಂಬರ್ 5 ರ ಬೆ 6 ಗಂಟೆಯವರೆಗೆ ಗದಗ, ಶಿರಹಟ್ಟಿ, ಲಕ್ಷ್ಮೇಶ್ವರ, ನರಗುಂದ, ಮುಂಡರಗಿ, ರೋಣ, ಗಜೇಂದ್ರಗಡ ತಾಲೂಕುಗಳಲ್ಲಿ, 11ನೇ ದಿನ ಸೆಪ್ಟೆಂಬರ್ 6 ರಂದು ಬೆ 6 ಗಂಟೆಯಿಂದ ಸೆಪ್ಟೆಂಬರ್ 7 ರ ಬೆ 6 ಗಂಟೆಯವರೆಗೆ ಗದಗ, ಲಕ್ಷ್ಮೇಶ್ವರ, ಶಿರಹಟ್ಟಿ, ನರಗುಂದ, ರೋಣ, ಗಜೇಂದ್ರಗಡಗಳಲ್ಲಿ, 13ನೇ ದಿನ ಸೆಪ್ಟೆಂಬರ್ 8 ರಂದು ಬೆ 6 ಗಂಟೆಯಿಂದ ಸೆಪ್ಟೆಂಬರ್ 9 ರ ಬೆ 6 ಗಂಟೆಯವರೆಗೆ ಲಕ್ಷ್ಮೇಶ್ವರ ಹಾಗೂ ಶಿರಹಟ್ಟಿ ತಾಲೂಕುಗಳಲ್ಲಿ, 15ನೇ ದಿನ ಸೆಪ್ಟೆಂಬರ್ 10 ರಂದು ಬೆ 6 ಗಂಟೆಯಿಂದ ಸೆಪ್ಟೆಂಬರ್ 11 ರ ಬೆ 6 ಗಂಟೆಯವರೆಗೆ ಲಕ್ಷ್ಮೇಶ್ವರ ಮತ್ತು ಶಿರಹಟ್ಟಿ ತಾಲೂಕುಗಳಲ್ಲಿ, 17ನೇ ದಿನ ಸೆಪ್ಟೆಂಬರ್ 12 ರಂದು ಬೆ 6 ಗಂಟೆಯಿಂದ ಬೆ 13 ರ ಬೆಳಿಗ್ಗೆ 6 ಗಂಟೆಯವರೆಗೆ ಲಕ್ಷ್ಮೇಶ್ವರ ಮತ್ತು ಶಿರಹಟ್ಟಿ ತಾಲೂಕುಗಳಲ್ಲಿ, 19 ನೇ ದಿನ ಸೆಪ್ಟೆಂಬರ್ 14 ರಂದು ಬೆ 6 ಗಂಟೆಯಿಂದ ಸೆಪ್ಟೆಂಬರ್ 15 ರ ಬೆ 6 ಗಂಟೆಯವರೆಗೆ ಲಕ್ಷ್ಮೇಶ್ವರ ಮತ್ತು ಶಿರಹಟ್ಟಿ ತಾಲೂಕುಗಳಲ್ಲಿ, 21ನೇ ದಿನ ಸೆಪ್ಟೆಂಬರ್ 16 ರ ಬೆ 6 ಗಂಟೆಯಿಂದ ಸೆಪ್ಟೆಂಬರ್ 17 ರ ಬೆ 6 ಗಂಟೆಯವರೆಗೆ ಗದಗ -ಬೆಟಗೇರಿ ನಗರಸಭೆ ವ್ಯಾಪ್ತಿಯಲ್ಲಿ ಗಜೇಂದ್ರಗಡ ತಾಲೂಕ/ ರೋಣ ತಾಲೂಕು/ ನರೇಗಲ್ ಠಾಣಾ ವ್ಯಾಪ್ತಿಯಲ್ಲಿ, 23ನೇ ದಿನ ಸೆಪ್ಟೆಂಬರ್ 18 ರಂದು ಬೆ 6 ಗಂಟೆಯಿಂದ ಸೆಪ್ಟೆಂಬರ್ 19 ರ ಬೆ 6 ಗಂಟೆಯವರೆಗೆ ಲಕ್ಷ್ಮೇಶ್ವರ ತಾಲೂಕಿನಲ್ಲಿ ಮದ್ಯ ಮಾರಾಟ ಮತ್ತು ಮದ್ಯ ಸಾಗಾಟ ನಿಷೇಧಿಸಲಾಗಿದೆ.

ಸಂಬಂಧಪಟ್ಟ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಸದರ ದಿನಗಳಂದು ಬಾರ್‌ಗಳು, ಕ್ಲಬ್‌ಗಳು, ಬಿಯರ್, ಭಾರತೀಯ ತಯಾರಿಕೆಯ ಮದ್ಯದ ಅಂಗಡಿಗಳನ್ನು ಮೇಲ್ಕಾಣಿಸಿದ ಅವಧಿಯಲ್ಲಿ ಮುಚ್ಚತಕ್ಕದ್ದು. ಪರಿಸ್ಥಿತಿಗೆ ಅನುಗುಣವಾಗಿ ಸಾರ್ವಜನಿಕ ಶಾಂತತೆಯನ್ನು ಕಾಯ್ದುಕೊಳ್ಳುವ ದೃಷ್ಟಿಯಿಂದ ವಲಯ ಅಬಕಾರಿ ಇನ್ಸಪೆಕ್ಟರ್ ಹಾಗು ಅಬಕಾರಿ ಉಪ ಆಯುಕ್ತರು ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿಗಳು ಆದೇಶ ಹೊರಡಿಸಿದ್ದಾರೆ.

## ಸೆ.2ರಂದು ಪೂರ್ವಭಾವಿ ಸಭೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಆದೇಶದನ್ವಯ ಈ ವರ್ಷವು ಸೆಪ್ಟೆಂಬರ್ 7 ರಂದು ಆಚರಿಸಲಾಗುವ ಬ್ರಹ್ಮಶ್ರೀ ನಾರಾಯಣಗುರು ಜಯಂತಿ ನಿಮಿತ್ತ ಸೆಪ್ಟೆಂಬರ್ 2 ರಂದು ಮಂಗಳವಾರ ಬೆಳಿಗ್ಗೆ:11.00 ಗಂಟೆಗೆ ಅಪರ ಜಿಲ್ಲಾಧಿಕಾರಿಗಳು, ಗದಗ ಇವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಕರೆಯಲಾಗಿದೆ.

ಸಭೆಗೆ ಹಾಜರಾಗಿ ಸಲಹೆ/ಅಭಿಪ್ರಾಯ ನೀಡಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಹಾತ್ಮಗಾಂಧಿ ಸೇವಾ ಪ್ರಶಸ್ತಿ; ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರ್ಕಾರವು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ ಸ್ಥಾಪಿಸಿರುವ ಐದು ಲಕ್ಷ ರೂಪಾಯಿ ನಗದನ್ನು ಒಳಗೊಂಡ ಮಹಾತ್ಮಗಾಂಧಿ ಸೇವಾ ಪ್ರಶಸ್ತಿ-ಕರ್ನಾಟಕಗೆ ಪ್ರಸಕ್ತ ಸಾಲಿಗೆ ಅರ್ಹ ಸಾಧಕರನ್ನು ಅಥವಾ ಸಂಘ ಸಂಸ್ಥೆಗಳನ್ನು ಆಯ್ಕೆ ಮಾಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಸಾರ್ವಜನಿಕ ಜೀವನದಲ್ಲಿ ಮಹಾತ್ಮಗಾಂಧೀಜಿಯವರ ಆದರ್ಶಗಳನ್ನು ಅಳವಡಿಸಿಕೊಂಡು ಜೀವನ ನಡೆಸುತ್ತಿರುವ ಕನಿಷ್ಠ 60 ವರ್ಷಗಳಾಗಿರುವ ವ್ಯಕ್ತಿಗಳು ಅಥವಾ 25 ವರ್ಷಗಳು ತುಂಬಿರುವ ಸೇವಾ ಸಂಸ್ಥೆಗಳನ್ನು ಈ ಪ್ರಶಸ್ತಿಗೆ ಪರಿಗಣಿಸಲಾಗುವುದು.

ಮಹಾತ್ಮಗಾಂಧೀಜಿಯವರು ಪ್ರಚುರುಪಡಿಸಿದ ಜನಪರ ಕಾರ್ಯಕ್ರಮಗಳಾದ " ಅಸ್ಪೃಶ್ಯತೆ ನಿವಾರಣೆ". "ಅಹಿಂಸೆ", "ಮಹಿಳಾ ಸಬಲೀಕರಣ", "ಗ್ರಾಮೀಣ ನೈರ್ಮಲ್ಯ", "ಮದ್ಯಪಾನ ವಿರೋಧಿ ನೀತಿ", "ಖಾದಿ ಮತ್ತು ಸ್ವದೇಶಿ ವಸ್ತು ಬಳಕೆ", "ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಏಳಿಗೆ", ಈ ಕ್ಷೇತ್ರಗಳಲ್ಲಿ ಸ್ವಯಂ ಪ್ರೇರಣೆಯಿಂದ ತೊಡಗಿರುವ ವ್ಯಕ್ತಿಗಳು ಅಥವಾ ಸಂಸ್ಥೆಗಳು ಈ ಪ್ರಶಸ್ತಿಗೆ ಅರ್ಜಿ ಸಲ್ಲಿಸಬಹುದು. ಸಂಘ ಸಂಸ್ಥೆಗಳು ಅಥವಾ ವ್ಯಕ್ತಿಗಳು ಶಿಫಾರಸ್ಸನ್ನು ಕೂಡ ಮಾಡಬಹುದಾಗಿದೆ.

### ಶಿರಹಟ್ಟಿಯ ಪಟ್ಟಣ ಪಂಚಾಯಿತಿಗೆ ಲೋಕಾಯುಕ್ತ ಡಿವಿಸ್‌ಪಿ ಬಿರಾದಾರ ಭೇಟಿ

## ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಸಾರ್ವಜನಿಕರಿಂದ ಆಕ್ರೋಶ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶನಿವಾರ ಶಿರಹಟ್ಟಿಯ ಪಟ್ಟಣ ಪಂಚಾಯಿತಿ ಕಚೇರಿಗೆ ಗದಗ ಲೋಕಾಯುಕ್ತ ಡಿಎಸ್‌ಪಿ ವಿಜಯ ಬಿರಾದಾರ ನೇತೃತ್ವದ ತಂಡ ಭೇಟಿ ನೀಡಿತು. ಈ ಸಂದರ್ಭದಲ್ಲಿ ಮುಖ್ಯಾಧಿಕಾರಿ/ಇಂಜಿನಿಯರ್/ಸಿಬ್ಬಂದಿಗಳ ಬೇಜವಾಬ್ದಾರಿ ಹಾಗೂ ನಿರ್ಲಕ್ಷ್ಯಕ್ಕೆ ಸ್ಥಾಯಿ ಸಮಿತಿ ಅಧ್ಯಕ್ಷ, ನಾಮ ನಿರ್ದೇಶಿತ ಸದಸ್ಯರು ಮತ್ತು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದರು.

ಪಟ್ಟಣ ಪಂಚಾಯಿತಿ ವ್ಯಾಪ್ತಿಯ ವಾರ್ಡ್‌ನಲ್ಲಿ ಮಣ್ಣು ಹಾಕದೇ ಬಿಲ್ ತೆಗೆದಿದ್ದನ್ನು ದಾಖಲೆ ಸಮೇತ ಪ್ರಶ್ನಿಸಿದ್ದಕ್ಕೆ ಮುಖ್ಯಾಧಿಕಾರಿ ತಮಗೆ ನೋಟೀಸ್ ನೀಡಿದ್ದು ಸರಿಯೇ ಎಂದು ನಾಮನಿರ್ದೇಶಿತ ಸದಸ್ಯರು ಮತ್ತು ಸ್ಥಾಯಿ ಸಮಿತಿ ಅಧ್ಯಕ್ಷರು ಲೋಕಾಯುಕ್ತರ ಎದುರಿಗೆ ಮುಖ್ಯಾಧಿಕಾರಿ ತಮಗೆ ನೀಡಿದ ನೋಟೀಸ್ ಪ್ರತಿಯನ್ನು ತೋರಿಸಿದರು.



ನಿಗದಿತ ಸಮಯದಲ್ಲಿ ಸಭೆಗಳನ್ನು ನಡೆಸುತ್ತಿಲ್ಲ, ಇಂಜಿನಿಯರ್ ಲಾಗಿನ್ ಇತರರೂ ಉಪಯೋಗಿಸುತ್ತಿದ್ದಾರೆ. ಮಳಿಗೆಗಳ ಹರಾಜು ಪ್ರಕ್ರಿಯೆ ನಡೆದಿಲ್ಲ, ಸಭೆಯಲ್ಲಿ ಅನುಮೋದನೆ ಇಲ್ಲದೇ ಹಲವು ಕೆಲಸಗಳನ್ನು ಮಾಡುತ್ತಿದ್ದಾರೆ. ಭ್ರಷ್ಟಾಚಾರ ನಡೆದಿದ್ದನ್ನು ಪ್ರಶ್ನಿಸಿದರೆ ನಮಗೆ ನೋಟೀಸ್ ನೀಡಲಾಗುತ್ತಿದೆ ಎಂದು ತಮ್ಮ ಅಳಲನ್ನು ತೋಡಿಕೊಂಡರು.

ಶಿರಹಟ್ಟಿ ಪಟ್ಟಣ ಪಂಚಾಯಿತಿಲ್ಲಿ ಒಂದು ಉತಾರ ಪಡೆಯುವುದಕ್ಕೆ ವರ್ಷಗಟ್ಟಲೇ ಅಲೆದಾಡಿದರೂ ನಮ್ಮಿಂದ ತೆ-ರಿಗೆ ತುಂಬಿಸಿಕೊಂಡು ಸತಾಯಿಸುತ್ತಿದ್ದಾರೆಂದು ತಾವು ನೀಡಿದ್ದ ಅರ್ಜಿಯ ಸ್ವೀಕೃತಿ ಪ್ರತಿಯನ್ನು ಲೋಕಾಯುಕ್ತರಿಗೆ ತೋರಿಸಿದರು.
ಎಲ್ಲ ಕೆಲಸ-ಕಾರ್ಯಗಳನ್ನು ಬಿಟ್ಟು ನಿತ್ಯವೂ ಕಚೇರಿಗೆ ಅಲೆದಾಡಬೇಕಾದ ದುಸ್ಥಿತಿ ಬಂದಿದೆ ಎಂದು ಅನೇಕರು ತಮ್ಮ ಅಳಲನ್ನು ತೋಡಿಕೊಂಡರು. ಸಾರ್ವಜನಿಕರು ದೂರು ಸ್ವೀಕರಿಸುತ್ತಿರುವ ಸಂದರ್ಭದಲ್ಲೇ ಪಟ್ಟಣ ಪಂಚಾಯತ ಸಿಬ್ಬಂದಿ ಓರ್ವರಿಗೆ ಸ್ಥಳದಲ್ಲಿಯೇ ಉತಾರ ಪೂರೈಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಲೋಕಾಯುಕ್ತರು ಈ ಎಲ್ಲ ವಿಷಯಗಳ ಕುರಿತು ಗದಗ ಯೋಜನಾ ನಿರ್ದೇಶಕರಿಗೆ, ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸುವುದು ಸೂಕ್ತ. ನಮಗೆ ಫಾರಂ 1 ಮತ್ತು 2ರಲ್ಲಿ ದೂರನ್ನು ಸಲ್ಲಿಸಬಹುದಾಗಿದೆ ಎಂದು ಹೇಳಿದರು.

ಶಿರಹಟ್ಟಿ ಪ.ಪಂನ ಅಡಿಟ್ ರಿಪೋರ್ಟ್, ಲೇಔಟ್‌ಗಳ ಕಡತಗಳು, ಬೀದಿ ದೀಪಗಳ ಖರ್ಚು, ಕುಡಿಯುವ ನೀರಿನ ಘಟಕಗಳ ಮಾಹಿತಿ, ವಾಟರ್ ಟ್ಯಾಂಕ್ ಕ್ಲೀನಿಂಗ್ ವರದಿ, ಟ್ಯಾಕ್ಸ್ ಲೇಔಟ್ ರಜಿಸ್ಟರ್, ಖಾತಾ ಬದಲಾವಣೆ ರಜಿಸ್ಟರ್ ಹೀಗೆ 33ಕ್ಕೂ ಹೆಚ್ಚು ದಾಖಲೆಗಳನ್ನು ಸೆ.2ರ ಒಳಗೆ ಗದಗ ಕಚೇರಿಗೆ ತಲುಪಿಸುವಂತೆ ಇಂಜಿನಿಯರ್‌ಗೆ ಲೋಕಾಯುಕ್ತ ಅಧಿಕಾರಿಗಳು ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಸ್ಥಾಯಿ ಸಮಿತಿ ಅಧ್ಯಕ್ಷ ಹೊನ್ನಪ್ಪ ಶಿರಹಟ್ಟಿ, ನಾಮನಿರ್ದೇಶಿತ ಸದಸ್ಯ ಅಲ್ಲಾಭಕ್ಷಿ ನಗಾರಿ, ಸೋಮನಗೌಡ ಮರಿಗೌಡ, ಇಂಜಿನಿಯರ್ ಕಾಟೇವಾಲ್ ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka